ಸಂಪುಟ : 10 ಸಂಚಿಕೆ: 246 ಪುಟ : 4+2 ಬೆಲೆ: 3.00 ಬುಧವಾರ ನವೆಂಬರ್ 12 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 246 Pages : 4+2 Price : 3.00 Wednesday November 12 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅಕ್ರಮ ಸಂಬಂಧಕ್ಕೆ ಅಡ್ಡಿ: ಗಂಡನನ್ನೇ ಕೊಲೆಗೈದು ಜೈಲು ಪಾಲಾದ ಹೆಂಡ್ತಿ!

■ ವಿಜಯಸಾಕ್ಷಿ ಸುದ್ದಿ, ಮೈಸೂರು

ಜಿಲ್ಲೆಯ ನಂಜನಗೂಡು ತಾಲೂಕಿನ ಹುಲ್ಲಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಅಕ್ರಮ ಸಂಬಂಧಕ್ಕೆ ಅಡ್ಡಿಯಾಗಿದ್ದಾನೆಂದು ತಾಳಿಕಟ್ಟಿದ್ದ ಗಂಡನನ್ನೇ ಪತ್ನಿ ಕೊಲೆ ಮಾಡಿರುವ ಘಟನೆ ಜರುಗಿದೆ.

ವೀರಣ್ಣ ಕೊಲೆಯಾದ ಗಂಡ. ಶಿವಮ್ಮ ಕೊಲೆಗೈದ ಪಾಪಿ ಪತ್ನಿ. ಗಂಡ ನಿದ್ದೆಗೆ ಜಾರುತ್ತಿದ್ದಂತೆಯೇ ಪತ್ನಿ ಶಿವಮ್ಮ, ಹೊಡೆಯ ಬಾರದ ಜಾಗಕ್ಕೆ ಹೊಡೆದು ಕೊಂದು ಹಾಕಿದ್ದಾಳೆ. ಬಳಿಕ ಸೀರೆಯಿಂದ ನೇಣಿಗೆ ಹಾಕಿ ಆತ್ಮಹತ್ಯೆ ಎಂದು ಹೈಡ್ರಾಮಾ ಮಾಡಿದ್ದಳು. ಆದ್ರೆ, ಪೊಲೀಸರ ತನಿಖೆಯಲ್ಲಿ ಪತ್ನಿಯ ನವರಂಗಿ ಆಟ ಬಯಲಿಗೆ ಬಿದ್ದಿದೆ.

13 ವರ್ಷಗಳ ಹಿಂದೆ ಶಿವಮ್ಮ ವೀರಣ್ಣ ವಿವಾಹ ನೆರವೇರಿತ್ತು. ದಂಪತಿಗೆ ಇಬ್ಬರು ಗಂಡು ಮಕ್ಕಳಿದ್ದರು. ಈಕೆಗೆ ಕಳೆದ ನಾಲ್ಕು ವರ್ಷದಿಂದ ಹೆಚ್.ಡಿ.ಕೋಟೆಯ ಬಲರಾಮ ಎಂಬಾತನ ಪರಿಚಯವಾಗಿತ್ತು. ಆದ್ರೆ, ಪರಿಚಯ ಅಕ್ರಮ ಸಂಬಂಧಕ್ಕೆ ತಿರುಗಿತ್ತು. ಈ ವಿಚಾರ ಪತಿ ವೀರಣ್ಣಗೆ ತಿಳಿದು ತೀವ್ರ ವಿರೋಧ ವ್ಯಕ್ತಪಡಿಸಿದ್ದ. ಅಲ್ಲದೆ ಈ ವಿಚಾರದಲ್ಲಿ ನ್ಯಾಯ ಪಂಚಾಯತಿ ಸಹ ನಡೆದಿತ್ತು. ಹಲವು ಬಾರಿ ಆತನ ಸಂಪರ್ಕ ಬಿಡುವಂತೆ ಬುದ್ದಿ ಹೇಳಲಾಗಿತ್ತು. ಹೀಗಿದ್ದೂ ಶಿವಮ್ಮ ಹಾಗೂ ಬಲರಾಮ್ ನಡುವೆ ಸಂಬಂಧ ಮುಂದುವರೆದಿತ್ತು. ಹೀಗೆ ಮೊನ್ನೆ ರಾತ್ರಿ ಬಲರಾಮ ಫೋನ್ ಮಾಡಿದ್ದ. ಈ ವಿಚಾರದಲ್ಲಿ ದಂಪತಿ ನಡುವೆ ಗಲಾಟೆ ಆಗಿದೆ. ರಾತ್ರಿ ಊಟ ಮಾಡಿ ಪತಿ ಮಲಗಿದ್ದಾರೆ. ಆ ವೇಳೆ ಬಡಿಗೆಯಿಂದ ಮರ್ಮಾಂಗಕ್ಕೆ ಹೊಡೆದು ಕೊಂದಿದ್ದಾಳೆ. ಬಳಿಕ ಶಿವಮ್ಮ ಬಾಯಿ ಬಡಿದುಕೊಂಡು ಮನೆಯಿಂದ ಹೊರಗೆ ಓಡೋಡಿ ಬಂದು ಗಂಡ ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಕಥೆ ಕಟ್ಟಿದ್ದಾಳೆ. ಆಗ ಹುಲ್ಲಹಳ್ಳಿ ಠಾಣೆ ಪೊಲೀಸರು ಸ್ಥಳಕ್ಕೆ ಬಂದು ನೋಡಿದಾಗ ಕುತ್ತಿಗೆಯಲ್ಲಿ ಸೀರೆ ಕಂಡು ಬಂದಿತ್ತು. ಆದರೂ ಪೊಲೀಸರಿಗೆ ಅನುಮಾನವೂ ಇತ್ತು. ಅದರಂತೆ ಪತ್ನಿ ಶಿವಮ್ಮಳನ್ನ ವಿಚಾರಣೆಗೊಳಪಡಿಸಿದಾಗ ಬಲರಾಮ ಜೊತೆಗಿನ ಸಂಬಂಧಕ್ಕಾಗಿ ಗಂಡನನ್ನು ಕೊಲೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾಳೆ. ಸದ್ಯ ಹುಲ್ಲಹಳ್ಳಿ ಪೊಲೀಸರು ಶಿವಮ್ಮನನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ.

### ವಿದ್ಯಾದಾನ ಸಮಿತಿ ಮೈದಾನದಲ್ಲಿ ಅತಿರುದ್ರ ಮಹಾಯಾಗ, ಕಿರಿಯ ಕುಂಭಮೇಳದ ಉದ್ಘಾಟನಾ ಸಮಾರಂಭ

# ಮಾನವೀಯ ಗುಣಗಳುಳ್ಳ ಸಮಾಜವನ್ನು ನಿರ್ಮಿಸೋಣ

■ ವಿಜಯಸಾಕ್ಷಿ ಸುದ್ದಿ, ಗದಗ

ಸನಾತನ ಹಿಂದೂ ಧರ್ಮವನ್ನು ಛಿದ್ರಗೊಳಿಸಬೇಕೆಂಬ ಪ್ರಯತ್ನ ನೂರಾರು ವರ್ಷದಿಂದ ನಡೆದಿದೆ. ಆದರೆ, ಯಾವ ಶಕ್ತಿಗಳು ಈ ಧರ್ಮವನ್ನು ಮುಟ್ಟಲು ಬಂದಿವೆಯೋ, ಆವೆಲ್ಲ ಶಕ್ತಿಗಳು ನಾಮಾವಶೇಷವಾಗಿ ಹೋಗಿವೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಮಂಗಳವಾರ ಇಲ್ಲಿನ ವಿದ್ಯಾದಾನ ಸಮಿತಿ ಮೈದಾನದಲ್ಲಿ ಅತಿರುದ್ರ ಮಹಾಯಾಗ ಸೇವಾ ಸಮಿತಿ ಏರ್ಪಡಿಸಿದ್ದ ಅತಿರುದ್ರ ಮಹಾಯಾಗ ಮತ್ತು ಕಿರಿಯ ಕುಂಭಮೇಳ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದೈವ ಶಕ್ತಿಯ ಜೊತೆಗೆ ಸುರ ಮತ್ತು ಅಸುರರ ಶಕ್ತಿ ಇತ್ತು. ಸುರ-ಅಸುರರ ನಡುವೆ ಯಾವಾಗಲೂ ಸಂಘರ್ಷ ಆಗುತ್ತದೆ. ಆದರೆ, ಯಜ್ಞ-ಯಾಗಾದಿಗಳ ಮೂಲಕ ಗುರುಗಳು ಸತ್ಯಕ್ಕೆ, ನ್ಯಾಯಕ್ಕೆ, ಧರ್ಮಕ್ಕೆ ಜಯವನ್ನು ತಂದು ಕೊಟ್ಟಿದ್ದಾರೆ. ಅದು ಗುರುವಿನ ಶಕ್ತಿ. ಸುರ-ಅಸುರರ ಶಕ್ತಿಯನ್ನು ನಿಗ್ರಹಿಸಿರುವುದು ಮಹಾಶಿವ. ಮಹಾದೇವ ವಿಷಕಂಠನಾಗಿ ಸುರ-ಅಸುರರ ನಡುವೆ ನಡೆದ ಯುದ್ಧದಲ್ಲಿ ಹಾಲಾಹಲವನ್ನು ನುಂಗಿ ಇಡೀ ಜಗತ್ತಿಗೆ ಕಲ್ಯಾಣ ಮಾಡಿದ ಮಹಾದೇವನ ಹೆಸರಿನಲ್ಲಿ ಇಂದು ಯಜ್ಞ-ಯಾಗಾದಿಗಳು ನಡೆಯುತ್ತಿವೆ ಎಂದರು.

ಪರಮಪೂಜ್ಯ ಸಹದೇವಾನಂದ ಜೀ ಅವರು 12 ಲಕ್ಷ ಸಾಧುಗಳ ಅಖಾಡದ ಕಾರ್ಯದರ್ಶಿಯಾಗಿ ಕೆಲಸ ಮಾಡುತ್ತಿದ್ದಾರೆ. ಅವರ ತಪಸ್ಸನ್ನು ಸದಾ ಕಾಲ ಈ ಭೂಮಿಯ ಮೇಲೆ ಬಿಟ್ಟು ಹೋಗುತ್ತಿದ್ದಾರೆ. ಇದೆಲ್ಲ ನಮ್ಮ ಪುಣ್ಯ ಭಾಗ್ಯವಾಗಿದೆ. ಗದುಗಿನ ಜನರು ಬಹಳ ಪುಣ್ಯ ಮಾಡಿದ್ದೀರಿ, ಬರುವ ದಿನಗಳಲ್ಲಿ ಉತ್ತಮವಾಗಿರುವ, ಮಾನವೀಯ ಗುಣಗಳಿರುವ ಸಮಾಜವನ್ನು ನಿರ್ಮಾಣ ಮಾಡೋಣ ಎಂದು ಹೇಳಿದರು.

ಶ್ರೀ ಪಂಚದಶನಂ ಜುನಾ ಆಖಾಢ ಪೀಠಾಧೀಶ್ವರ ಶ್ರೀ ಸಹದೇವಾನಂದ ಗಿರಿಜಿ ಮಹಾರಾಜರು ನೇತೃತ್ವ ವಹಿಸಿದ್ದರು. ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು, ▸▸ 3ನೇ ಪುಟಕ್ಕೆ




ಅತಿರುದ್ರ ಮಹಾಯಾಗ ಸೇವಾ ಸಮಿತಿ ಗೌರವಾಧ್ಯಕ್ಷ, ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಪ್ರಯಾಗರಾಜ್‌ನಲ್ಲಿ ನಡೆದ ಮಹಾಕುಂಭ ಮೇಳದಲ್ಲಿ ಭಾಗಿಯಾಗಿಲ್ಲ ಎನ್ನುವ ನೋವು ನನಗಿತ್ತು. ಆದರೆ ಈ ಅತಿರುದ್ರ ಮಹಾಯಾಗ ಮತ್ತು ಕಿರಿಯ ಕುಂಭಮೇಳದಲ್ಲಿ ಭಾಗವಹಿಸಿರುವುದು ಆ ನೋವು ಮರೆಸಿದೆ. ಕಿರಣ್ ಬೂಮಾ ನೇತೃತ್ವದಲ್ಲಿ ಈ ಧಾರ್ಮಿಕ ಕಾರ್ಯಕ್ರಮ ಅತ್ಯಂತ ವಿಜೃಂಭಣೆಯಿಂದ ಆರಂಭವಾಗಿದೆ. 11 ಸಾವಿರ ಮಹಿಳೆಯರ ಕುಂಭಮೇಳ ಗದಗ ಪರಿಸರವನ್ನು ಪವಿತ್ರಗೊಳಿಸಿದೆ ಎಂದರು.



### ಜಿಲ್ಲಾಡಳಿತದಲ್ಲಿ ಜರುಗಿದ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಡಿಸಿ ಸಿ.ಎನ್. ಶ್ರೀಧರ್ ಅಭಿಮತ

# ಓಬವ್ವಳ ಸಮಯಪ್ರಜ್ಞೆ ಎಲ್ಲರಿಗೂ ಸ್ಫೂರ್ತಿ



■ ವಿಜಯಸಾಕ್ಷಿ ಸುದ್ದಿ, ಗದಗ

ವೀರವನಿತೆ ಒನಕೆ ಓಬವ್ವಳ ಸಮಯಪ್ರಜ್ಞೆ, ಬುದ್ಧಿವಂತಿಕೆ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿದವರು ಮಾತನಾಡಿದರು.

ಒನಕೆ ಓಬವ್ವ ಚಿತ್ರದುರ್ಗದ ಪಾಳೇಗಾರನಾದ ಮುದ್ದು ಹನುಮಪ್ಪನ ಹೆಂಡತಿಯಾಗಿದ್ದಳು. ಊಟ ಮಾಡಲು ಬಂದಿದ್ದ ತನ್ನ ಗಂಡನಿಗೆ ನೀರು ತರಲು ಹೋದಾಗ ಓಬವ್ವಳಿಗೆ ಹೈದರಾಲಿಯ ಸೈನ್ಯವು ಚಿತ್ರದುರ್ಗದ ಮದಕರಿ ನಾಯಕರ ಕೋಟೆಯ ಕಿಂಡಿಯಿಂದ ಒಳನುಸುಳುತ್ತಿರುವುದು ಕಂಡು ಬಂದಿತು. ಅಂತಹ ಪರಿಸ್ಥಿತಿಯಲ್ಲಿ ತನ್ನ ಜಾಣ್ಮೆಯಿಂದಲೇ ಹೈದರಾಲಿಯ ಸೈನಿಕರನ್ನು ಮನೆಯಲ್ಲಿರುವ ಒನಕೆಯಿಂದ ಹೊಡೆದು ಉಪಾಯದಿಂದಲೇ ಚಿತ್ರದುರ್ಗದ ಕೋಟೆಯನ್ನು ರಕ್ಷಿಸಿದಳು. ಕಷ್ಟದ ಪರಿಸ್ಥಿತಿಯಲ್ಲಿ ನಮ್ಮಲ್ಲಿರುವ ಬುದ್ಧಿಯನ್ನು ವಿವೇಚನೆಯಿಂದ ಉಪಯೋಗಿಸಿಕೊಂಡು ಸಮರ್ಥವಾಗಿ ನಿಭಾಯಿಸುವುದು ಮುಖ್ಯವಾಗಿದೆ ಎಂದು ತಿಳಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಮಾತನಾಡಿ, ಒನಕೆ ಓಬವ್ವಳ ಶೂರತನ, ಸಮಯ ಪ್ರಜ್ಞೆಯಂತಹ ತತ್ವಗಳನ್ನು ಎಲ್ಲ ▸▸ 3ನೇ ಪುಟಕ್ಕೆ

ಹುಲಕೋಟಿಯ ಜಿ.ಸಿ.ಟಿ.ಎಂ ಪದವಿಪೂರ್ವ ಕಾಲೇಜು ಪ್ರಾಚಾರ್ಯ ಡಾ. ಅರ್ಜುನ ಗೊಳಸಂಗಿ ಉಪನ್ಯಾಸ ನೀಡುತ್ತಾ, ಒನಕೆ ಓಬವ್ವ ದಲಿತ ಸಮುದಾಯದ ವೀರವನಿತೆಯಾಗಿದ್ದಾಳೆ. ಛಲವಾದಿ ಸಮುದಾಯದ ಪಾಳೆ ಕಾಯಕದವರಾದ ಮುದ್ದುಹನುಮಪ್ಪನ ಹೆಂಡತಿಯೇ ಓಬವ್ವ. ಮುದ್ದುಹನುಮಪ್ಪನು ಸ್ವಾಮಿನಿಷ್ಠೆ, ಸ್ವಾಭಿಮಾನ ಹಾಗೂ ಕಾಯಕನಿಷ್ಠೆ ಹೊಂದಿದವನು. ಓಬವ್ವ ಯಾವುದೇ ಯುದ್ಧವಿದ್ಯೆಯನ್ನು ಕಲಿತವಳಲ್ಲ.

ಆದರೂ ಹೈದರಾಲಿಯ ಸೈನ್ಯವು ವೀರಮದಕರಿನಾಯಕರ ಕೋಟೆಯನ್ನು ಆಕ್ರಮಿಸಿಕೊಂಡಾಗ ಉಪಾಯದಿಂದ ಕೋಟೆ ರಕ್ಷಿಸಿದ ಹಿರಿಮೆ ಓಬವ್ವಳದ್ದು. ಒನಕೆ ಓಬವ್ವ ಮನುಕುಲದ ಇತಿಹಾಸದಲ್ಲಿ ಧೀಮಂತ ಮಹಿಳೆಯಾಗಿದ್ದಾಳೆ ಎಂದು ವಿವರಿಸಿದರು.

# ತೊಟ್ಟಿಲು ತೂಗುವ ಕೈ ದೇಶವಾಳಬಲ್ಲದು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವೀರವನಿತೆ ಒನಕೆ ಓಬವ್ವ ಕನ್ನಡ ನಾಡಿನ ನಾರಿಯರ ಶಕ್ತಿಯ ಪ್ರತೀಕವಾಗಿದ್ದಾರೆ. ನಾಡಿನ ಸಂರಕ್ಷಣೆಯ ಬಗ್ಗೆ ಅವರಿಗಿದ್ದ ಅಭಿಮಾನ, ಸ್ವಾಭಿಮಾನ, ಸಮರ್ಪಣಾ ಮನೋಭಾವ ಎಲ್ಲರಿಗೂ ಸ್ಫೂರ್ತಿಯಾಗಿದೆ ಎಂದು ಶಾಸಕ ಡಾ. ಚಂದರು ಲಮಾಣಿ ಹೇಳಿದರು.

ಅವರು ಮಂಗಳವಾರ ಪಟ್ಟಣದ ಪುರಸಭೆಯಲ್ಲಿ ಒನಕೆ ಓಬವ್ವರ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ತೊಟ್ಟಿಲು ತೂಗುವ ಕೈ ದೇಶವನ್ನು ಆಳಬಲ್ಲದು ಎಂಬುದನ್ನು ಕನ್ನಡ ನಾಡಿನ ಹೆಮ್ಮೆಯ ಓಬವ್ವ ಸಾಬೀತುಪಡಿಸಿ ಇತಿಹಾಸದಲ್ಲಿ ದಾಖಲಾಗಿದ್ದಾರೆ. ಸ್ವಾತಂತ್ರ್ಯಕ್ಕಾಗಿ, ನಾಡಿನ ಸಂರಕ್ಷಣೆಗಾಗಿ ಉಸಿರಿರುವವರೆಗೆ ಹೋರಾಡಿದ ಕಿತ್ತೂರು ರಾಣಿ ಚೆನ್ನಮ್ಮ, ಉಳ್ಳಾಲದ ರಾಣಿ ಅಬ್ಬಕ್ಕ, ಬೆಳವಡಿ ಮಲ್ಲಮ್ಮ, ಕೆಳದಿ ಚೆನ್ನಮ್ಮ, ಒನಕೆ ಓಬವ್ವ ಮೊದಲಾದವರು ಸ್ಮರಣೀಯರು. ಚಿತ್ರದುರ್ಗದ ಕೋಟೆಯ ರಕ್ಷಣೆಗಾಗಿ ಸಮರ್ಪಣೆಗೈದ ವೀರಮಹಿಳೆ ಓಬವ್ವ ಇತಿಹಾಸದ ಪುಟದಲ್ಲಿ ಅಜರಾಮರರಾಗಿದ್ದಾರೆ. ಅವರ ಅಸಾಧಾರಣ ಧೈರ್ಯ, ಸಮಯ ಪ್ರಜ್ಞೆ ಮತ್ತು ದೇಶಭಕ್ತಿಯನ್ನು ನೆನಪಿಸಿಕೊಳ್ಳಲು ಸರ್ಕಾರ ಪ್ರತಿ ವರ್ಷ ನ.11ರಂದು ಅವರ ಜಯಂತಿಯನ್ನು ಆಚರಿಸುತ್ತದೆ ಎಂದರು.

ಈ ವೇಳೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಶೋಭಾ ಬೆಳ್ಳಿಕೊಪ್ಪ, ಮಂಜುನಾಥ ಮುದಗಲ್, ಹನುಮಂತ ನಂದೆಣ್ಣವರ, ನೇತ್ರಾ ಹೊಸಮನಿ, ಎಸ್.ಪಿ. ಲಿಂಬಯ್ಯನಮಠ, ಸುರೇಶ ಪೂಜಾರ, ವೆಂಕಟೇಶ ರಾಮಗಿರಿ, ಬಸವಣ್ಣೆಪ್ಪ ನಂದೆಣ್ಣವರ, ಗಂಗಾಧರ ಮೆಣಸಿನಕಾಯಿ, ವಿಶಾಲ ಬಟಗುರ್ಕಿ, ತಿಪ್ಪಣ್ಣ ಕೊಂಚಿಗೇರಿ, ಮುಂತಾದವರಿದ್ದರು. ಪಟ್ಟಣ ಸೇರಿ ಗ್ರಾಮೀಣ ಭಾಗದ ಶಾಲೆ-ಕಾಲೇಜು, ಸರ್ಕಾರಿ ಕಚೇರಿಗಳಲ್ಲಿ ಓಬವ್ವ ಜಯಂತಿ ಆಚರಿಸಲಾಯಿತು.

### ರೋಣ-ಗಜೇಂದ್ರಗಡ ತಾಲೂಕು ಪಂಚಾಯಿತಿಯಿಂದ ಆರೋಗ್ಯ ಶಿಬಿರ, ರಕ್ತ ತಪಾಸಣೆ

# ಆರೋಗ್ಯ ಕಾಪಾಡಿದರೆ ಮಾತ್ರ ಸಾಧನೆ ಸಾಧ್ಯ



■ ವಿಜಯಸಾಕ್ಷಿ ಸುದ್ದಿ, ರೋಣ

ಆರೋಗ್ಯ ಕಾಪಾಡಿಕೊಂಡರೆ ಮಾತ್ರ ಜೀವನದಲ್ಲಿ ಏನಾದರೂ ಸಾಧನೆ ಮಾಡಲು ಸಾಧ್ಯ. ಗ್ರಾಮ ಮಟ್ಟದ ಸಿಬ್ಬಂದಿಗಳ ಆರೋಗ್ಯ ಹಿತ ದೃಷ್ಟಿಯಿಂದ ಈ ಕಾರ್ಯಕ್ರಮ ಆಯೋಜಿಸಿದೆ. ಇಂತಹ ಕಾರ್ಯಕ್ರಮ ಆಯೋಜಿಸಿದ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಅಭಿನಂದನಾರ್ಹರು ಎಂದು ರೋಣ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಜಿ.ಪಾಟೀಲ (ಮಿಥುನಗೌಡ ಪಾಟೀಲ) ಹೇಳಿದರು.

ರೋಣ/ಗಜೇಂದ್ರಗಡ ತಾಲೂಕು ಪಂಚಾಯಿತಿ ಹಾಗೂ ತಾಲೂಕಾ ಆಸ್ಪತ್ರೆಯ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಆರ್‌ಡಿಪಿಆರ್ ▸▸ 3ನೇ ಪುಟಕ್ಕೆ

ರೋಣ ಹಾಗೂ ಗಜೇಂದ್ರಗಡ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಮಾತನಾಡಿ, ಪ್ರತಿಯೊಬ್ಬರಿಗೂ ಆರೋಗ್ಯದ ಬಗ್ಗೆ ಕಾಳಜಿ ಇರಬೇಕು. ಸಿಬ್ಬಂದಿಗಳ ಆರೋಗ್ಯ ಹಿತದೃಷ್ಟಿಯಿಂದ ಈ ಶಿಬಿರ ಆಯೋಜಿಸಲಾಗಿದೆ. ಇತ್ತೀಚಿನ ದಿನಗಳಲ್ಲಿ ಒತ್ತಡದಿಂದ ಬಳಲುತ್ತಿರುವವರು ಹೆಚ್ಚಾಗಿದ್ದಾರೆ. ಹಣವೊಂದೇ ಜೀವನವಲ್ಲ, ಆರೋಗ್ಯವೇ ಮುಖ್ಯ ಬಂಡವಾಳ ಎಂದರು.

### ರಾಜ್ಯ ಸರಕಾರದ ವಿರುದ್ಧ ನಗರದಲ್ಲಿ ನ.15ರಂದು ಬೃಹತ್ ಪ್ರತಿಭಟನೆ

# ಲಿಂಗಾಯತ ಶ್ರೀಗಳನ್ನು ಗುರಿಯಾಗಿಸಲಾಗುತ್ತಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿಯವರನ್ನು ವಿಜಯಪುರ ಹಾಗೂ ಬಾಗಲಕೋಟೆ, ಧಾರವಾಡ ಜಿಲ್ಲೆಗೆ ಪ್ರವೇಶ ನಿರ್ಬಂಧ ಹೇರಿರುವ ರಾಜ್ಯ ಸರಕಾರದ ವಿರುದ್ಧ ನಗರದಲ್ಲಿ ನ.15ರಂದು ಬೆಳಗ್ಗೆ 10ಕ್ಕೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಲಿಂಗದಾಳ ಸಹಜಾನಂದ ಮಂಡಳಿಯ ವಸಂತಗೌಡ ಪೊಲೀಸ್‌ಪಾಟೀಲ್ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ನಗರದ ರಾಣಿ ಚೆನ್ನಮ್ಮ ಸರ್ಕಲ್‌ನಿಂದ ಬೃಹತ್ ಪ್ರತಿಭಟನೆ ಪ್ರಾರಂಭವಾಗಿ ಮುಳಗುಂದ ನಾಕಾ, ಟಿಪ್ಪು ಸರ್ಕಲ್ ಮುಖಾಂತರ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಸಂಚರಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗುತ್ತದೆ. ಜಿಲ್ಲೆಯಲ್ಲಿ 3-4 ಸಾವಿರ ಜನರು ಈ ಪ್ರತಿಭಟನೆಯಲ್ಲಿ ಸೇರಲಿದ್ದಾರೆ. ಹಂಸನೂರಿನ ಬಸವರಾಜೇಂದ್ರ ಸ್ವಾಮೀಜಿ, ಕಣ್ಣೂರಿನ ಗೀರಿಮಲೇಶ್ವರ ಸ್ವಾಮೀಜಿ, ಚನ್ನಮಲ್ಲಿಕಾರ್ಜುನ, ಪ್ರಣವ ಪ್ರಕಾಶ ಮಹಾರಾಜರು, ವಿಶ್ವನಾಥ ಮಹಾರಾಜರು, ಚಿಕ್ಕಲಗುಂಡಿ ಶ್ರೀಗಳು ಪ್ರತಿಭಟನೆಗೆ ಆಗಮಿಸಲಿದ್ದಾರೆ.

ರೈತರೇ ನನ್ನ ಮನೆ ದೇವರು ಎಂದು ಹೇಳಿದ ಏಕೈಕ ಸ್ವಾಮೀಜಿ ಅದೃಶ್ಯ ಕಾಡಸಿದ್ದೇಶ್ವರ ಶ್ರೀಗಳು. ಅವರು ಆಡಿದ ಒಂದು ಮಾತನ್ನು ಮುಂದಿಟ್ಟುಕೊಂಡು ರಾಜ್ಯ ಸರ್ಕಾರ ನಿರ್ಬಂಧ ಹೇರಿದ್ದು ಸರಿಯಾದ ಕ್ರಮವಲ್ಲ. ಲಿಂಗಾಯತ-ವೀರಶೈವ ಒಡೆಯುವ ಹುನ್ನಾರವನ್ನು ರಾಜ್ಯ ಸರ್ಕಾರ ಮಾಡುತ್ತಿದೆ. ರೈತರಿಗೆ ಉಪಯುಕ್ತ ಸಲಹೆ ಸೂಚನೆಯನ್ನು ಶ್ರೀಗಳು ನೀಡುತ್ತಿದ್ದರು. ಸಾವಯವ ಕೃಷಿ, ಗುರುಕುಲ ಶಿಕ್ಷಣಕ್ಕೆ ಅವರು ಒತ್ತು ನೀಡುತ್ತಾರೆ. ಸರ್ಕಾರ ಸ್ವಾಮೀಜಿಗಳ ಕ್ಷಮೆ ಕೇಳಿ ನಿರ್ಬಂಧ ತೆರವುಗೊಳಿಸಬೇಕು. ಸಚಿವ ಎಂ.ಬಿ. ಪಾಟೀಲ ಒಳ್ಳೆಯ ಕೆಲಸ ಮಾಡಿದಾಗ ಶ್ರೀಗಳು ಶ್ಲಾಘಿಸಿದ್ದರು. ಆದರೆ, ಅಂತವರ ವಿರುದ್ಧವೇ ಷಡ್ಯಂತ್ರ ನಡೆಸಿರುವುದು ಖಂಡನೀಯ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಲಿಂಗದಾಳ ಸಹಜಾನಂದ ಮಂಡಳಿಯ ಸದಸ್ಯರಾದ ಪ್ರದೀಪಕುಮಾರ ನವಲಗುಂದ, ಭರಮಗೌಡ ಕರಿಸೋಮನಗೌಡ, ವೀರಣ್ಣ ಕರಿಬಿಷ್ಠೆ, ಎಚ್.ಆರ್. ತಿರ್ಲಾಪುರ, ಮಲ್ಲಿಕಾರ್ಜುನ ತೊಂಡಿಹಾಳ, ದೊಡ್ಡಬಸಪ್ಪ ಗೊಜನೂರ, ಶೇಖರಗೌಡ ಚಿಕ್ಕನಗೌಡ್ರ, ಭಾಸ್ಕರ ಕರಿಸೋಮನಗೌಡ್ರ, ನಾಗೇಶ ಹುಬ್ಬಳ್ಳಿ, ಎಂ.ಡಿ. ಚನ್ನಶೆಟ್ಟಿ, ಅಶೋಕ ಜಿನಗಿ, ರಾಜು ಜಾನೋಪಂತರ, ಎಸ್.ಎಸ್. ಪಾಟೀಲ ಮುಂತಾದವರು ಇದ್ದರು.




ಸಮಾಜಕ್ಕೆ ಹತ್ತು ಹಲವು ಜನಪರವಾದ ಕೆಲಸವನ್ನು ಹಾಗೂ ಸಮಾಜಕ್ಕೆ ಒಳಿತಾಗುವ ಕೆಲಸವನ್ನು ಮಾಡಿರುವ ಸ್ವಾಮೀಜಿಗಳ ಬಗ್ಗೆ ಹೀಗೆ ಮಾಡಿರುವುದು ಸರಿಯಾದ ಕ್ರಮವಲ್ಲ. ಸರ್ಕಾರ ಒಡೆದು ಆಳುವ ನೀತಿ ಅನುಸರಿಸುತ್ತಿದೆ. ಕೆಲವು ಸಂಘಟನೆಗಳ ನಡುವೆ ಬೆಂಕಿ ಹಚ್ಚುವ ಕೆಲಸ ಮಾಡಲಾಗುತ್ತಿದೆ. ಲಿಂಗಾಯತ ಸ್ವಾಮೀಜಿಗಳನ್ನು ಟಾರ್ಗೆಟ್ ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಇದೇ ಮುಂದುವರಿದರೆ ಉಗ್ರ ಹೋರಾಟ ಮಾಡಲಾಗುತ್ತದೆ ಎಂದು ವಸಂತಗೌಡ ಪೊಲೀಸ್‌ಪಾಟೀಲ್ ಆರೋಪಿಸಿದರು.

## 14ರಂದು ಸಿದ್ಧಾರೂಢ ಮಹಾಸ್ವಾಮಿಗಳ ಜಾತ್ರಾ ಮಹೋತ್ಸವ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ನವೆಂಬರ್ 14 ರಂದು ಸಂಜೆ 5-30ಕ್ಕೆ ತಾಲೂಕಿನ ದದೇಗಲ್ ಗ್ರಾಮದಲ್ಲಿ ಶ್ರೀ ಜಗದ್ಗುರು ಸಿದ್ಧಾರೂಢ ಮಹಾಸ್ವಾಮಿಗಳ 36ನೇ ಜಾತ್ರಾ ಮಹೋತ್ಸವ ಹಾಗೂ ಶ್ರೀ ಸದ್ಗುರು ಸೋಮಲಿಂಗ ಮಹಾಸ್ವಾಮಿಗಳ 22ನೇ ವರ್ಷದ ಪುಣ್ಯಾರಾಧನೆ, ಸಾಮೂಹಿಕ ವಿವಾಹ ಮತ್ತು ಮಹಾರಥೋತ್ಸವ ಜರುಗಲಿದೆ ಎಂದು ದದೇಗಲ್‌ನ ಸಿದ್ಧಾರೂಢ ಸೇವಾ ಟ್ರಸ್ಟ್ ಸಮಿತಿಯ ಅಧ್ಯಕ್ಷರಾದ ಶ್ರೀ ಆತ್ಮಾನಂದ ಭಾರತಿ ಮಹಾಸ್ವಾಮಿಗಳು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕಾರ್ಯಕ್ರಮಗಳ ದಿವ್ಯ ಸಾನ್ನಿಧ್ಯವನ್ನು ಕೊಪ್ಪಳದ ಶ್ರೀ ಸಂಸ್ಥಾನ ಗವಿಮಠದ ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಗಳು ವಹಿಸುವರು. ಹಂಪಿ ಹೇಮಕೂಟದ ಶ್ರೀ ಶಿವರಾಮ ಅವಧೂತ ಆಶ್ರಮದ ಸದ್ಗುರು ಶ್ರೀ ವಿದ್ಯಾನಂದ ಭಾರತಿ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ಕೊಪ್ಪಳದ ರಾಮಕೃಷ್ಣ ಆಶ್ರಮದ ಶ್ರೀ ಚೈತನ್ಯಾನಂದ ಸ್ವಾಮಿಗಳು, ಚಿಕೇನಕೊಪ್ಪ ಶ್ರೀ ಶಂಭುಲಿಂಗಾರೂಢಮಠದ ಶ್ರೀ ಅನ್ನದಾನಿ ಭಾರತಿ ಮಹಾಸ್ವಾಮಿಗಳು, ಕುಕನೂರು ಅನ್ನದಾನೇಶ್ವರ ಶಾಖಾಮಠದ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಡಾ.ಮಹಾದೇವ ದೇವರು, ಭಾಗ್ಯನಗರ ಶಂಕರಾಚಾರ್ಯಮಠದ ಶಿವಪ್ರಕಾಶನಂದ, ಶಿವರಾಮಕೃಷ್ಣಾನಂದ ಮಹಾಸ್ವಾಮಿಗಳು, ಗದಗ-ಬೆಟಗೇರಿಯ ಮುಖಣೇಶ್ವರಮಠದ ಶಂಕರಾನಂದ ಸ್ವಾಮಿಗಳು, ಬಸಾಪುರ ಸಿದ್ಧಾರೂಢಮಠದ ಶ್ರೀ ಪ್ರಣವಾನಂದ ಸ್ವಾಮಿಗಳು, ಈರಣ್ಣ ಹುರಕಡ್ಲಿ, ಅಭಿನವ. ಅಜ್ಜಪ್ಪ ಹುರಕಡ್ಲಿ, ಶರಣಪ್ಪ ಗುದಗಿ, ಮುದುಕಪ್ಪಜ್ಜ ಮೂಗಿನ್, ಕುಮಾರಪ್ಪಜ್ಜ ಬಂಡಿ ವೇದಾಂತ ಉಪನ್ಯಾಸ ನೀಡುವರು. ದದೇಗಲ್ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸದ್ಭಕ್ತರು ಆಗಮಿಸಿ, ಪಾಲ್ಗೊಂಡು ಸಿದ್ಧಾರೂಢರ ಕೃಪೆಗೆ ಪಾತ್ರರಾಗುವಂತೆ ಶ್ರೀ ಆತ್ಮಾನಂದ ಭಾರತಿ ಮಹಾಸ್ವಾಮಿಗಳು ತಿಳಿಸಿದ್ದಾರೆ.

ಹಿರೇಮಠದ ಜಾತ್ರಾ ಮಹೋತ್ಸವದ 2ನೇ ದಿನದ ಕಾರ್ಯಕ್ರಮದಲ್ಲಿ ಉಮೇಶ ಪಾಟೀಲ ಅಭಿಮತ

# ಶ್ರೀಗಳ ಪ್ರವಚನವನ್ನು ಕೇಳಿ ಪುನೀತರಾಗಿ




ಡಾ. ಕೃಷ್ಣ ಕಾಳೆ ಮಾತನಾಡಿ, ನರೇಗಲ್ಲ ಪಟ್ಟಣದಲ್ಲಿ ಏನಾದರೂ ಸಾಂಸ್ಕೃತಿಕ ವಾತಾವರಣ ಉಳಿದಿದೆ ಎಂದರೆ ಅದು ಇಲ್ಲಿನ ಶ್ರೀ ಹಿರೇಮಠದಿಂದ ಮತ್ತು ಇಲ್ಲಿನ ಕೆಲವು ಸಂಘಟನೆಗಳು ನಡೆಸುತ್ತಿರುವ ಸಾಹಿತ್ತಿಕ, ಸಾಂಸ್ಕೃತಿಕ ಚಟುವಟಿಕೆಗಳಿಂದ. ಇಲ್ಲಿ ಬಂದಿರುವ ತಾಯಂದಿರು ನಿಮ್ಮ ಮಕ್ಕಳಲ್ಲಿ ಸಂಸ್ಕಾರ ಬೆಳೆಸಲು ಪ್ರಯತ್ನಿಸಿ. ಮಕ್ಕಳೂ ಸಹ ತಮ್ಮ ತಂದೆ-ತಾಯಿಗಳನ್ನು ಗೌರವಿಸುವದರ ಜೊತೆಗೆ, ಅವರ ಮಾತುಗಳಿಗೆ ಕಿವಿಗೊಡುವುದನ್ನು ಕಲಿಯಬೇಕು. ಜೀವನ ಬಹಳಷ್ಟು ದಿನಗಳದ್ದಲ್ಲ ಎಂಬುದನ್ನು ನೆನಪಿಡಿ. ದುಶ್ಚಟಕ್ಕೆ ಬಿದ್ದು ಹಾಳು ಮಾಡಿಕೊಳ್ಳುವ ಬದಲು ಗುರು-ಹಿರಿಯರ ಮಾತುಗಳನ್ನು ಕೇಳಿ. ಇದರಿಂದ ನಿಮ್ಮ ಜೀವನಕ್ಕೊಂದು ಅರ್ಥ ಬರುತ್ತದೆ ಎಂದರು.

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪುರಾಣ-ಪುಣ್ಯ ಕಥೆಗಳು ನಮ್ಮ ಬದುಕಿಗೆ ದಾರಿದೀಪಗಳಾಗಿವೆ. ಇವುಗಳನ್ನು ಶ್ರವಣ ಮಾಡುವುದರಿಂದ ನಮ್ಮ ಮನದ ಕ್ಲೇಷಗಳು ದೂರಾಗುತ್ತವೆ. ದೂರದರ್ಶನದಲ್ಲಿ ಬರುವ ಧಾರವಾಹಿಗಳನ್ನು ನೋಡುವದರಿಂದ ನಮ್ಮ ಮನಸ್ಸಿನ ಮೇಲೆ ಕೆಟ್ಟ ಪರಿಣಾಮವಾಗುತ್ತದೆ. ಬದಲಾಗಿ ಪೌರಾಣಿಕ ಧಾರಾವಾಹಿಗಳನ್ನು ನೋಡಿ ಮನೆಯಲ್ಲಿ ಸಂಸ್ಕಾರಯುತ ವಾತಾವರಣವಿರುವಂತೆ ನೋಡಿಕೊಳ್ಳಿ ಎಂದು ಹಿರೆಅಳಗುಂಡಿಯ ಚನ್ನು ಪಾಟೀಲ ಫೌಂಡೇಷನ್ ಸಂಸ್ಥಾಪಕ ಉಮೇಶ ಪಾಟೀಲ ಹೇಳಿದರು.

ಪಟ್ಟಣದಲ್ಲಿ ನಡೆದಿರುವ ಹಿರೇಮಠದ ಜಾತ್ರಾ ಮಹೋತ್ಸವದ 2ನೇ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಸಿದ್ಧಾಂತ ಶಿಖಾಮಣಿಯನ್ನು ಹೇಳುವುದರಲ್ಲಿ ನಾಡಿನಲ್ಲಿಯೇ ಪ್ರಸಿದ್ಧರು ಎಂದು ಕೇಳಿ ತಿಳಿದಿದ್ದೇನೆ. ಇಂತಹ ರತ್ನವನ್ನು ಪಡೆದುಕೊಂಡಿರುವ ನೀವೇ ಧನ್ಯರು. ಇಲ್ಲೊಂದು ಹಿರೇಮಠವಿದೆ, ಇಲ್ಲಿನ ಸ್ವಾಮೀಜಿ ಪ್ರವಚನ ಪ್ರವೀಣರು ಎಂದು ತಿಳಿದು ನನಗೆ ಅತ್ಯಂತ ಸಂತೋಷವಾಗಿದೆ ಎಂದು ಹೇಳಿದ ಪಾಟೀಲ, ನಿತ್ಯವೂ ಬಂದು ಇಲ್ಲಿನ ಕಾರ್ಯಕ್ರಮಗಳನ್ನು ವೀಕ್ಷಿಸುವುದರ ಜೊತೆಗೆ ಶ್ರೀಗಳವರ ಪ್ರವಚನವನ್ನು ಕೇಳಿ ಪುನೀತರಾಗಿರಿ ಎಂದರು.

ಡಾ. ಎಸ್.ಎಲ್. ಗ್ರಾಮಪುರೋಹಿತ ಮಾತನಾಡಿ, ಹರ ಮುನಿದರೆ ಗುರು ಕಾಯುವ ಎಂಬ ಮಾತೊಂದಿದೆ. ನಮಗೆ ಗುರುಗಳ ರೂಪದಲ್ಲಿ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ದೊರಕಿದ್ದಾರೆ. ಅವರ ನುಡಿಗಳನ್ನು ಕೇಳುವ ಸೌಭಾಗ್ಯ ನಮಗೆ ಸಿಕ್ಕಿದೆ. ಈ ಅವಕಾಶವನ್ನು ನಾವು ಸದುಪಯೋಗ ಪಡಿಸಿಕೊಳ್ಳೋಣ. ನಮ್ಮಲ್ಲಿ ಮೊದಲು ಮಾನವೀಯ ಗುಣಗಳನ್ನು ಬೆಳೆಸಿಕೊಂಡು ಮಾನವತೆಯಿಂದ ಬದುಕೋಣ.

ಇಲ್ಲದಿದ್ದರೆ ನಾವು ಪಶುವಿಗೆ ಸಮಾನರಾಗುತ್ತೇವೆ. ನಾವೇ ಹೀಗಾದರೆ ನಮ್ಮ ಮುಂದಿನ ಪೀಳಿಗೆ ಅದಕ್ಕಿಂತಲೂ ಕಡೆಯಾಗುತ್ತದೆ. ಅದಕ್ಕೆ ನೀವೆಂದಿಗೂ ಅವಕಾಶ ಕೊಡಬೇಡಿ ಎಂದರು.

ಮಲ್ಲಿಕಾರ್ಜುನ ಶ್ರೀಗಳವರು ಶ್ರೀ ವೀರಭದ್ರೇಶ್ವರ ಪುರಾಣದಲ್ಲಿನ ಕೆಲವಷ್ಟು ಭಾಗವನ್ನು, ಸಿದ್ಧಾಂತ ಶಿಖಾಮಣಿಯಲ್ಲಿನ ಮಹತ್ವದ ಅಂಶಗಳ ಬಗ್ಗೆ ಪ್ರವಚನ ನೀಡಿದರು. ವೇದಿಕೆಯ ಮೇಲೆ ನಿವೃತ್ತ ಶಿಕ್ಷಕ ಬಿ.ಬಿ. ಮಲ್ಲನಗೌಡ್ರ, ರಾಜು ಮಣ್ಣೊಡ್ಡರ, ನಾರಾಯಣ ವಡ್ಡಟ್ಟಿ, ಕಳಕನಗೌಡ ಪೊಲೀಸ್‌ಪಾಟೀಲ ಉಪಸ್ಥಿತರಿದ್ದರು. ಈಶ್ವರ ಬೆಟಗೇರಿ ನಿರ್ವಹಿಸಿದರು.

ಮಕ್ಕಳಿಲ್ಲದ ದಂಪತಿಗಳ ಮಡಿಲಿಗೆ ದತ್ತು ಮಗು ಹಸ್ತಾಂತರ

# ಮಕ್ಕಳ ಕಲ್ಯಾಣಕ್ಕೆ ಸಮಿತಿ ಬದ್ಧ

**■ವಿಜಯಸಾಕ್ಷಿ ಸುದ್ದಿ, ಗದಗ**

ಪರಿತ್ಯಕ್ತ ಮಕ್ಕಳ ಸಂರಕ್ಷಣೆ, ಮಕ್ಕಳ ರಕ್ಷಣೆಗೆ ಮಕ್ಕಳ ಕಲ್ಯಾಣ ಸಮಿತಿ ಬದ್ಧತೆಯಿಂದ ಕಾರ್ಯ ನಿರ್ವಹಿಸುತ್ತಿದೆ ಎಂದು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ಜಯದೇವಿ ಕವಲೂರ ಹೇಳಿದರು.

ಅವರು ಸೋಮವಾರ ಬೆಟಗೇರಿಯ ಸೇವಾಭಾರತಿ ಸಂಸ್ಥೆಯ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಕೇಂದ್ರದಲ್ಲಿ ಪೋಷಣೆಗೊಂಡ ಈರ್ವರು ಮಕ್ಕಳನ್ನು ಕಾನೂನು ಅಡಿಯಲ್ಲಿ ಮಕ್ಕಳಿಲ್ಲದ ದಂಪತಿಗೆ ಹಸ್ತಾಂತರಿಸುವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು.

ಮಕ್ಕಳ ಹಕ್ಕು ಮತ್ತು ಸಂರಕ್ಷಣೆಯ ವಿಷಯವಾಗಿ ಸರ್ಕಾರ ಹಲವಾರು ಕ್ರಮಗಳನ್ನು ಜರುಗಿಸಿದ್ದು, ಅವುಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವಲ್ಲಿ ಮಕ್ಕಳ ಕಲ್ಯಾಣ ಸಮಿತಿ ಕ್ರಿಯಾಶೀಲತೆಯಿಂದ, ಜವಾಬ್ದಾರಿಯುತವಾಗಿ ಕೆಲಸ ಮಾಡುತ್ತಿದ್ದು, ಈ ಕಾರ್ಯಕ್ಕೆ ಸಾರ್ವಜನಿಕರ, ಪ್ರಜ್ಞಾವಂತರ ಸಹಕಾರವೂ ಅಗತ್ಯ ಎಂದರು.




ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಬೆಟಗೇರಿಯ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಕೇಂದ್ರದ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ಮಾತನಾಡಿ, ದತ್ತು ಕೇಂದ್ರಗಳಿಗೆ ಸರ್ಕಾರ ವಿಧಿಸಿರುವ ಕಾಯ್ದೆ-ಕಾನೂನುಗಳನ್ನು ಕಟ್ಟುನಿಟ್ಟಾಗಿ ಪರಿಪಾಲಿಸಿಕೊಂಡು ಸಂಸ್ಥೆ ಬದ್ಧತೆಯಿಂದ ಕಾರ್ಯ ನಿರ್ವಹಿಸುತ್ತಿದೆ. ಸಮಿತಿಯೊಂದಿಗೆ ಆಡಳಿತ ಸಿಬ್ಬಂದಿ ಹಾಗೂ ಮಕ್ಕಳ ಪೋಷಣೆಯಲ್ಲಿ ತಮ್ಮನ್ನು ಹಗಲಿರುಳು ತಮ್ಮನ್ನು ಸಮರ್ಪಿಸಿಕೊಂಡಿರುವ ತಾಯಂದಿರ ಪಾತ್ರ ಮೆಚ್ಚುವಂತದ್ದು ಎಂದು ಬಣ್ಣಿಸಿದರು.

ಅತಿಥಿಗಳಾಗಿ ಆಗಮಿಸಿದ್ದ ಹುಬ್ಬಳ್ಳಿಯ ಗಣ್ಯ ವ್ಯಾಪಾರಸ್ಥ ಮಂಜುನಾಥ ಹರ್ಲಾಪೂರ ಹಾಗೂ ಸುವರ್ಣಾ ಹರ್ಲಾಪೂರ ಮಾತನಾಡಿ, ಮಕ್ಕಳ ರಕ್ಷಣೆ, ಪಾಲನೆ-ಪೋಷಣೆ ಮಾಡುವಲ್ಲಿ ಸೇವಾಭಾರತಿ ಸಂಸ್ಥೆಯ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಕೇಂದ್ರ ಚೆನ್ನಾಗಿ ಕೆಲಸ ಮಾಡುತ್ತಿದೆ. ಇದೊಂದು ಪುಣ್ಯದ ಕಾರ್ಯ ಎಂದರು.

70 ಹಾಗೂ 71ನೇ ಮಗುವನ್ನು ದತ್ತು ಸ್ವೀಕರಿಸಿದ ಬಂಟ್ವಾಳದ ಉಮೇಶ ದಂಪತಿ ಮತ್ತು ಬೆಂಗಳೂರಿನ ಶಿವಕುಮಾರ ದಂಪತಿ ಮಾತನಾಡಿ, ಆನ್‌ಲೈನ್‌ನಲ್ಲಿ ಈ ಮಕ್ಕಳನ್ನು ಗುರುತಿಸಿ ಮಗುವನ್ನು ಪಡೆಯಲು ಅತೀವ ಸಂತೋಷ ಎನ್ನಿಸುತ್ತಿದೆ. ಇದಕ್ಕೆ ಅವಕಾಶ ಮಾಡಿಕೊಟ್ಟ ಸರ್ವರಿಗೂ ಕೃತಜ್ಞತೆಗಳು ಎಂದರು.

ವೇದಿಕೆಯ ಮೇಲೆ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯೆ ಸುಪರ್ಣಾ ಬ್ಯಾಹಟ್ಟಿ ಉಪಸ್ಥಿತರಿದ್ದರು. ಅನಿತಾ ಬೆಲ್ಲದ ಪ್ರಾರ್ಥಿಸಿದರು. ನಾಗವೇಣಿ ಕಟ್ಟಿಮನಿ ಸ್ವಾಗತಿಸಿದರು. ಅರುಣ ರಾಜಪುರೋಹಿತ ನಿರೂಪಿಸಿದರು. ಕೊನೆಗೆ ಗುರುಸಿದ್ಧಪ್ಪ ಕೊಣ್ಣೂರ ವಂದಿಸಿದರು.

ಸಮಾರಂಭದಲ್ಲಿ ಅನಿಲ ಗಡ್ಡಿ, ಲುಕ್ಕಣಸಾ ರಾಜೋಳಿ, ಸಂಜಯ ತೆಂಬದಮನಿ, ರಾಧಾ ಬೆಲ್ಲದ, ಮುತ್ತುರಾಜ ಚವಡಿ, ಪ್ರಮೋದ ಹಿರೇಮಠ, ಮಂಜುನಾಥ ಬೆಲ್ಲದ, ಈಶ್ವರ ಚವಡಿ, ಶ್ರೀಧರ ಕಾಂಬಳೆ, ಅಭಿಷೇಕ ಮಾಳೋದೆ, ಜ್ಯೋತಿ ಸಂಗಮದ, ಗಾಯತ್ರಿ ಬೆಲ್ಲದ ಮುಂತಾದವರಿದ್ದರು.

# ವಲ್ಲಭಬಾಯಿ ಪಟೇಲರ ಪಾತ್ರ ಸ್ಮರಣೀಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಸ್ವತಂತ್ರ ಭಾರತದ ಮೊದಲ ಉಪ ಪ್ರಧಾನಮಂತ್ರಿ ಮತ್ತು ಗೃಹ ಸಚಿವರಾಗಿ ಸುಮಾರು 565ಕ್ಕೂ ಹೆಚ್ಚು ರಾಜಸಂಸ್ಥಾನಗಳನ್ನು ಭಾರತದ ಒಕ್ಕೂಟಕ್ಕೆ ಸೇರಿಸುವಲ್ಲಿ ನಿರ್ವಹಿಸಿದ ಸರ್ದಾರ್ ವಲ್ಲಭಭಾಯಿ ಪಟೇಲರ ತಂತ್ರ ಮತ್ತು ಕೌಶಲ್ಯಗಳನ್ನು ಭಾರತೀಯರು ಎಂದಿಗೂ ಮರೆಯಲು ಸಾಧ್ಯವಿಲ್ಲವೆಂದು ಪ್ರೊ. ಸುಧಾ ಕೌಜಗೇರಿ ಹೇಳಿದರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಎನ್.ಎಸ್.ಎಸ್ ಘಟಕವು 'ಸರ್ದಾರ್ ವಲ್ಲಭಭಾಯಿ ಪಟೇಲರ ಜನ್ಮದಿನ ಮತ್ತು ರಾಷ್ಟ್ರೀಯ ಐಕ್ಯತಾ ದಿನ' ಅಂಗವಾಗಿ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳ ಬಹುಮಾನ ವಿತರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇತಿಹಾಸ ಪ್ರಾಧ್ಯಾಪಕ ಮತ್ತು ಎನ್.ಎಸ್.ಎಸ್ ಘಟಕದ ಕಾರ್ಯಕ್ರಮ ಅಧಿಕಾರಿ ಪ್ರೊ. ಅಪ್ಪಣ್ಣ ಹಂಜೆ ಮಾತನಾಡಿ, ಭಾರತದ ಸ್ವಾತಂತ್ರ್ಯ, ರಾಜಕೀಯ ಏಕೀಕರಣ ಮತ್ತು ನವಭಾರತದ ಸರ್ವತೋಮುಖ ಅಭಿವೃದ್ಧಿಗೆ ತಮ್ಮನ್ನು ಸಂಪೂರ್ಣ ಅರ್ಪಿಸಿಕೊಂಡ ಪಟೇಲರ ಬದುಕು, ಸಾಧನೆ, ಕೊಡುಗೆಗಳು ಸದಾಕಾಲ ಸ್ಮರಣೀಯವಾಗಿದ್ದು, ವಿದ್ಯಾರ್ಥಿಗಳು ಅವರ ಜೀವನ ಮೌಲ್ಯಗಳು, ಆದರ್ಶಗಳನ್ನು ಓದಿಕೊಂಡು ಸರಳ ಬದುಕು, ದೃಢನಿರ್ಧಾರ, ರಾಷ್ಟ್ರಸೇವೆಯನ್ನು ಮೈಗೂಡಿಸಿಕೊಳ್ಳಬೇಕೆಂದು ಹೇಳಿದರು.

ಸಾಂಸ್ಕೃತಿಕ ವಿಭಾಗದ ಸಂಯೋಜಕ ರಮೇಶ ಹುಲಕುಂದ, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಹುಸೇನಭಾಷ, ಸುಭಾಸ ಹರಿಹರ ಅವರು ಪಟೇಲರ ಬದುಕು, ಹೋರಾಟ, ಚಳುವಳಿ, ರಾಷ್ಟ್ರೀಯ ಏಕತೆ ಕುರಿತು ಮಾತನಾಡಿದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ಚರ್ಚಾಸ್ಪರ್ಧೆ, ಉಪನ್ಯಾಸಗಳು, ಪೋಸ್ಟರ್, ಬ್ಯಾನರ್, ಪಟಗಳ ತಯಾರಿಕೆ ಸ್ಪರ್ಧೆಗಳನ್ನು ಏರ್ಪಡಿಸಿ, ವಿಜೇತರಿಗೆ ಪ್ರಶಸ್ತಿಪತ್ರ ಮತ್ತು ಬಹುಮಾನಗಳನ್ನು ವಿತರಿಸಲಾಯಿತು. ಪ್ರೊ. ಲಕ್ಷ್ಮಣ ಮುಳಗುಂದ ರಾಷ್ಟ್ರೀಯ ಐಕ್ಯತಾ ದಿನದ ಪ್ರತಿಜ್ಞಾವಿಧಿ ಬೋಧಿಸಿದರು. ಎನ್.ಎಸ್.ಎಸ್ ಸ್ವಯಂ ಸೇವಕರು ಕಾರ್ಯಕ್ರಮ ನಡೆಸಿಕೊಟ್ಟರು.

## ದೆಹಲಿ ಸ್ಫೋಟ : ಯುಎಪಿಎ, ಸ್ಫೋಟಕ ಕಾಯ್ದೆಯಡಿ ಎಫ್‌ಐಆರ್ ದಾಖಲು

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಒಂಭತ್ತು ಜನರ ಸಾವಿಗೆ ಕಾರಣವಾದ ದೆಹಲಿಯ ಕೆಂಪು ಕೋಟೆ ಮೆಟ್ರೋ ನಿಲ್ದಾಣದ ಬಳಿ ಸಂಭವಿಸಿದ ಕಾರು ಸ್ಫೋಟಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರು ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ (ಯುಎಪಿಎ) ಅಡಿ ಪ್ರಕರಣ ದಾಖಲಿಸಿದ್ದಾರೆ ಎಂದು ಸುದ್ದಿ ಸಂಸ್ಥೆ ಎಎನ್‌ಐ ವರದಿ ಮಾಡಿದೆ. ಭಾರತೀಯ ನ್ಯಾಯ ಸಂಹಿತೆ ಮತ್ತು ಸ್ಫೋಟಕ ಕಾಯ್ದೆಯ ಸೆಕ್ಷನ್‌ಗಳನ್ನು ಕೂಡ ಅನ್ವಯಿಸಲಾಗಿದೆ ಎಂದು ಉಪ ಪೊಲೀಸ್ ಆಯುಕ್ತ ರಾಜಾ ಬಂಥಿಯಾ ತಿಳಿಸಿದ್ದಾರೆ. ರಾಷ್ಟ್ರೀಯ ಭದ್ರತಾ ಪಡೆ (ಎನ್‌ಎಸ್‌ಜಿ) ದೆಹಲಿ ಪೊಲೀಸರು ಮತ್ತು ವಿಧಿವಿಜ್ಞಾನ ಪ್ರಯೋಗಾಲಯದ ತಂಡಗಳು ಘಟನಾ ಸ್ಥಳದಲ್ಲಿ ತನಿಖೆ ಕೈಗೊಂಡಿವೆ ಎಂದು ಹೇಳಿದ್ದಾರೆ.

## ಸಾವಿರಕ್ಕೂ ಅಧಿಕ 'ನಕಲಿ ಮತದಾರರು' ಪತ್ತೆ : ಮಹತ್ವದ ಅಧ್ಯಯನ ವರದಿ ಬಿಡುಗಡೆ

**■ವಿಜಯಸಾಕ್ಷಿ ಸುದ್ದಿ, ಹೈದರಾಬಾದ್**

ಭಾರತ ರಾಷ್ಟ್ರ ಸಮಿತಿ (ಬಿಆರ್‌ಎಸ್) ಶಾಸಕ ಮಗಂತಿ ಗೋಪಿನಾಥ್ ಅವರ ನಿಧನದಿಂದ ತೆರವಾದ ಹೈದರಾಬಾದ್‌ನ ಜುಬಿಲಿ ಹಿಲ್ಸ್ ವಿಧಾನಸಭಾ ಕ್ಷೇತ್ರಕ್ಕೆ ಮಂಗಳವಾರ (ನ.11) ಉಪ ಚುನಾವಣೆ ನಡೆಯಿತು. ಉಪ ಚುನಾವಣೆಗೆ ಬಿಆರ್‌ಎಸ್ ಪಕ್ಷ ಮಗಂತಿ ಗೋಪಿನಾಥ್ ಅವರ ಪತ್ನಿ ಮಗಂತಿ ಸುನಿತಾ ಅವರನ್ನು ಕಣಕ್ಕಿಳಿಸಿದ್ದು, ಅನುಕಂಪದ ಆಧಾರದಲ್ಲಿ ಗೆಲ್ಲುವ ಲೆಕ್ಕಾಚಾರದಲ್ಲಿದೆ.

## ಗದುಗಿನ ವಿದ್ಯಾದಾನ ಸಮಿತಿ ಮೈದಾನದಲ್ಲಿ ಮಂಗಳವಾರ ಅತಿರುದ್ರ ಮಹಾಯಾಗ ಸೇವಾ ಸಮಿತಿ ಏರ್ಪಡಿಸಿದ್ದ ಅತಿರುದ್ರ ಮಹಾಯಾಗ ಮತ್ತು ಕಿರಿಯ ಕುಂಭಮೇಳಗಳ ಉದ್ಘಾಟನಾ ಸಮಾರಂಭದ ವಿವಿಧ ದೃಶ್ಯಾವಳಿಗಳು















# ರಾಷ್ಟ್ರೀಯ ಶಿಕ್ಷಣ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಲಕ್ಕುಂಡಿ ಗ್ರಾಮೀಣ ವಿದ್ಯಾವರ್ಧಕ ಸಂಸ್ಥೆಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ರಾಷ್ಟ್ರೀಯ ಶಿಕ್ಷಣ ದಿನಾಚರಣೆಯನ್ನು ಆಚರಿಸಲಾಯಿತು.

ದಿನಾಚರಣೆಯ ಕುರಿತು ಹಿರಿಯ ಶಿಕ್ಷಕ ಬಸವರಾಜ ಗರ್ಜಪ್ಪನವರ ಮಾತನಾಡಿ, ಸ್ವತಂತ್ರ ಭಾರತದ ಪ್ರಥಮ ಶಿಕ್ಷಣ ಮಂತ್ರಿ, ಆಧುನಿಕ ಭಾರತದ ಶಿಕ್ಷಣ ಶಿಲ್ಪಿ, ಅರಬ್ಬಿ, ಉರ್ದು, ಪರ್ಷಿಯನ್, ಇಂಗ್ಲೀಷ್ ಭಾಷೆ, ಗಣಿತ, ಸಾಹಿತ್ಯ, ಯುನಾನಿ ವೈದ್ಯ ವಿಜ್ಞಾನಗಳನ್ನು ಕರಗತ ಮಾಡಿಕೊಂಡಿದ್ದ ಭಾರತರತ್ನ ಡಾ. ಮೌಲಾನಾಅಬುಲ್ ಕಲಾಂ ಆಜಾದ್ ಅವರ ಜನ್ಮದಿನದ ಅಂಗವಾಗಿ ನವೆಂಬರ್ 11ರಂದು ರಾಷ್ಟ್ರೀಯ ಶಿಕ್ಷಣ ದಿನಾಚರಣೆಯನ್ನು ಆಚರಿಸಲಾಗುತ್ತದೆ. ವಿದ್ಯಾರ್ಥಿಗಳು ಅವರ ತತ್ವ-ಆದರ್ಶಗಳನ್ನು ವ್ಯಿಗ್ಊಡಿಸಿಕೆೊಂಡ್ು ಅವರಂತೆ ಶಿಕ್ಷಣ ಕ್ಷೇತ್ರದಲ್ಲಿ ಕೌಶಲ್ಯವಂತಾರಾಗಬೇಕೆಂದು ಹೇಳಿದರು.

ಮುಖ್ಯ ಶಿಕ್ಷಕಿ ಆರ್.ಬಿ. ಬರದ್ವಾಡ, ಅರ್ಜುನ ಚಲವಾದಿ, ರಫಿಯಾದಂಡಿನ, ಎ.ಎಂ. ದಂಡಿನ, ಪಿ.ಬಿ. ಬರದ್ವಾಡ, ಲಕ್ಷ್ಮೀ ಗರ್ಜಪ್ಪನವರ ಇದ್ದರು.

ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ ತರಬೇತಿ ಕಾರ್ಯಕ್ರಮ ಉದ್ಘಾಟಿಸಿದ ಈಶ್ವರ ಉಳ್ಳಾಗಡ್ಡಿ

# ಹಿರಿಯರ ಅನುಭವಗಳು ಬಾಳಿನ ಬೆಳಕಾಗಲಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ಬಾಲ ವಿಕಾಸ ಅಕಾಡೆಮಿಯು ನಾಡಿನ ಅವಕಾಶ ವಂಚಿತ ಹಾಗೂ ನಾಡಿನ ಮಕ್ಕಳ ಪಾಲಿನ ಕಾಮಧೇನುವಾಗಿದೆ. ಮಕ್ಕಳಿಗಾಗಿ ಹಮ್ಮಿಕೊಂಡಿರುವ ವಿಶೇಷ ಕಾರ್ಯಕ್ರಮಗಳು ನಿಜಕ್ಕೂ ಅರ್ಥಪೂರ್ಣವಾಗಿದ್ದು, ಅಧ್ಯಕ್ಷ ಸಂಗಮೇಶ ಬಬಲೇಶ್ವರ ನೇತೃತ್ವದಲ್ಲಿ ಮಕ್ಕಳ ಬದುಕಿಗೆ ಹೊಸ ತಿರುವು ನೀಡಲು ಅಕಾಡೆಮಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಅರ್ಥಪೂರ್ಣವಾಗಿವೆ ಎಂದು ಧಾರವಾಡದ ಸಾರ್ವಜನಿಕ ಶಿಕ್ಷಣ ಇಲಾಖೆಯ ಅಪರ ಆಯುಕ್ತರಾದ ಡಾ. ಈಶ್ವರ ಉಳ್ಳಾಗಡ್ಡಿ ಹೇಳಿದರು.

ಅವರು ಮಂಗಳವಾರ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯು ನೇಚರ್ ಫಸ್ಟ್ ಇಕೋ ವಿಲೇಜ್‌ನಲ್ಲಿ ಬಾಲಮಂದಿರ ಮಕ್ಕಳಿಗಾಗಿ ಏರ್ಪಡಿಸಿರುವ 15 ದಿನಗಳ ವಸತಿಯುತ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಇಂದಿನಿಂದ 15 ದಿನಗಳವರೆಗೆ ರಾಜ್ಯದ 31 ಜಿಲ್ಲೆಗಳ ಬಾಲ ಮಂದಿರ ಮಕ್ಕಳಿಗಾಗಿ ಏರ್ಪಡಿಸಿರುವ ಮಕ್ಕಳ ವ್ಯಕ್ತಿತ್ವ ವಿಕಸನ ಕಾರ್ಯಾಗಾರವು ಮಾದರಿ ಕಾರ್ಯಕ್ರಮ. ಇಲ್ಲಿ ವಿಶೇಷವಾದ ಸ್ಫೂರ್ತಿಯನ್ನು ಪಡೆದು ನಿಮ್ಮ ಬದುಕನ್ನು ಬದಲಾಯಿಸಿಕೊಳ್ಳಿ ಮತ್ತು ರೂಪಿಸಿಕೊಳ್ಳಿ. ಇಂಥ ಪರಿಸರಸ್ನೇಹಿ ಸ್ಥಳದಲ್ಲಿ ಮಕ್ಕಳಿಗಾಗಿ ನಿಸರ್ಗದ ಮಡಿಲಲ್ಲಿ ಏರ್ಪಡಿಸಿರುವ ಈ ಕಾರ್ಯಕ್ರಮ ಅರ್ಥಪೂರ್ಣವಾದದ್ದು ಎಂದು ಹೇಳಿದರು.

ನಾಡಿನ ಮೂಲೆ ಮೂಲೆಯಿಂದ ಪಾಲ್ಗೊಂಡಿರುವ ಮಕ್ಕಳು ಈ ವ್ಯಕ್ತಿತ್ವ ವಿಕಸನ ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕು. 10 ಜಿಲ್ಲೆಗಳಂತೆ ಮೂರು ತಂಡಗಳನ್ನು ಮಾಡಿ, ಐದು ದಿನಗಳಂತೆ ಒಟ್ಟು 15 ದಿನ ನಡೆಯುವ ಈ ವಿಶಿಷ್ಟ ಕಾರ್ಯಕ್ರಮದಲ್ಲಿ ಹಲವಾರು ಜನ ಸಾಧಕರನ್ನು ಭೇಟಿ ಮಾಡಲಿದ್ದೀರಿ, ಅವರ ಅನುಭವಗಳು ನಿಮ್ಮ ಬಾಳಿಗೆ ಬೆಳಕಾಗಲಿ ಎಂದು ಹಾರೈಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಮಾತನಾಡಿ, ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಆಶಯವು ಈ ನಾಡಿನ ಅವಕಾಶ ವಂಚಿತ ಮಕ್ಕಳ ಬದುಕಿಗೆ ಹೊಸ ಕಾಯಕಲ್ಪ ನೀಡುವುದಾಗಿದೆ. ಅವಕಾಶ ವಂಚಿತ ಮಕ್ಕಳು ಸಮಾಜದ ಮುಖ್ಯ ವಾಹಿನಿಗೆ ಬರಬೇಕು ಎನ್ನುವುದು ನಮ್ಮೆಲ್ಲರ ಸದಾಶಯವಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಪರಿಸರವಾದಿ ಪಿ.ವಿ. ಹಿರೇಮಠ ಮಾತನಾಡಿ, ಪರಿಸರವನ್ನು ಉಳಿಸುವ, ಪರಿಸರ ಜಾಗೃತಿ ಮೂಡಿಸುವ ಕೆಲಸ ಇಂದಿನ ತುರ್ತು ಅಗತ್ಯವಾಗಿದ್ದು, ಮಕ್ಕಳು ಪರಿಸರ ಪ್ರೇಮವನ್ನು ಬೆಳೆಸಿಕೊಳ್ಳಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಉಮೇಶ ಬೊಮ್ಮಕ್ಕನವರ, ಶಿಕ್ಷಕ ಫಕೀರೇಶ ಮುಡಿಯನ್ನವರ, ಅಕ್ಷರ ದಾಸೋಹದ ಅಧಿಕಾರಿ ಬಸವರಾಜ, ಶಿಕ್ಷಕ ಹಾಗೂ ಸಾಹಿತಿ ಬೆಂತೂರ, ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಅನ್ನಪೂರ್ಣ ಸಂಗಳದ. ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಅಧಿಕಾರಿಗಳಾದ ಪುಷ್ಪ ಹಂಜಗಿ, ಸ್ವರ್ಣ ಲತಾ, ಮೇಟಿ. ಸಂಪನ್ಮೂಲ ವ್ಯಕ್ತಿಗಳು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು, ಮೊದಲ ಹಂತದ 9 ಜಿಲ್ಲೆಗಳ ಬಾಲ ಮಂದಿರದ ಮಕ್ಕಳು ಹಾಗೂ ಕ್ಷೇಮ ಪಾಲಕರು ಉಪಸ್ಥಿತರಿದ್ದರು.

# ವೀರಮಾತೆ ಒನಕೆ ಓಬವ್ವ ಜಯಂತ್ಯುತ್ಸವ




■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಒನಕೆ ಓಬವ್ವ 18ನೇ ಶತಮಾನದ ಚಿತ್ರದುರ್ಗದ ಕೋಟೆಯ ಪಾಳೆಗಾರನಾಗಿದ್ದ ಮದಕರಿ ನಾಯಕನ ಕೋಟೆಯ ಕಾವಲುಗಾರ ಕಹಳೆ ಮದ್ದಹನುಮಪ್ಪನ ಹೆಂಡತಿ. ಇವರನ್ನು ಕನ್ನಡ ನಾಡಿನ ವೀರವನಿತೆಯರಾದ ಕಿತ್ತೂರು ಚೆನ್ನಮ್ಮ, ರಾಣಿ ಅಬ್ಬಕ್ಕರ ಸಾಲಿನಲ್ಲಿ ಪರಿಗಣಿಸಲಾಗುತ್ತದೆ ಎಂದು ಮುಖ್ಯ ಶಿಕ್ಷಕ ಬಸವರಾಜ ಕುರಿ ಹೇಳಿದರು.

ನರೇಗಲ್ಲನ ಕೆಜಿಎಸ್ ಶಾಲೆಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ವೀರಮಾತೆ ಒನಕೆ ಓಬವ್ವ ಮತ್ತು ಮೌಲಾನಾ ಅಬುಲ್ ಕಲಾಂ ಅಜಾದ್ ಜಯಂತಿಯಲ್ಲಿ ಅವರು ಮಾತನಾಡಿದರು.

ಓಬವ್ವ ತ್ರಿಕಾಲಗಳಿಗೂ ಪ್ರಭಾವಿಸುವಂತಹ ವ್ಯಕ್ತಿತ್ವ ಸಂಪಾದಿಸಿದ್ದರಿಂದಲೇ ಸಾಂಸ್ಕೃತಿಕ ನಾಯಕಿ ಎಂಬ ಅಭಿದಾನಕ್ಕೆ ಅರ್ಹಳಾಗಿದ್ದಾಳೆ. ಆಕೆಯ ಸೌಮ್ಯತೆ, ಸೌಜನ್ಯ, ವಿವೇಕ, ವಿವೇಚನೆ, ವಿಚಾರಗಳು ಅಪ್ಯಾಯಮಾನ ಎಂದರು. ಎನ್.ಎಲ್. ಚೌಹಾನ್, ಎಂ.ಪಿ. ಅಣಗೌಡರ್, ಎಸ್.ಐ. ಜಗಾಪೂರ, ಡಿ.ವಿ. ಕಳ್ಳಿ, ಜೆ.ಎ. ಪಾಟೀಲ, ಎಂ.ಎಸ್. ಮಾಳಶೆಟ್ಟಿ, ರಾಜೇಶ್ವರಿ ತೊಂಡೆಹಾಳ, ಲಕ್ಷ್ಮೀ ಬಂಡಿ ವಡ್ಡರ್, ವಿಜಯಲಕ್ಷ್ಮೀ ಕುಸ್ತಿ ಮತ್ತು ಮಕ್ಕಳು ಹಾಜರಿದ್ದರು.

ಪಟ್ಟಣ ಪಂಚಾಯಿತಿಯಲ್ಲಿ ಮಂಗಳವಾರ ವೀರಮಾತೆ ಒನಕೆ ಓಬವ್ವ ಜಯಂತ್ಯುತ್ಸವವನ್ನು ಆಚರಿಸಲಾಯಿತು. ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಎಚ್.ಎಂ. ಸೀತಿಮನಿ, ಎಸ್.ಎ. ಮೆಣಸಗಿ, ಆರೀಫ್ ಮಿರ್ಜಾ, ರಕ್ಷತ ಮುತಗಾರ, ಶಂಕ್ರಪ್ಪ ದೊಡ್ಡಣ್ಣವರ, ಮಹಾದೇವ ಮ್ಯಾಗೇರಿ, ಉದಯ ಗುಡಿಮನಿ, ಶೇಖಪ್ಪ ಹೊನವಾಡ, ನೀಲಪ್ಪ ಚಳ್ಳಮರದ, ಎಂ.ಎಚ್. ಕಾತರಕಿ, ಕಾವ್ಯಾ ಅರವಟಗಿಮಠ, ನಿರ್ಮಲಾ ಕಡೆತೋಟದ, ಎ.ಎಸ್. ಬಂಕಾಪೂರ, ಎಸ್.ಎ. ಹೊಸಮನಿ ಇದ್ದರು.

ಗ್ರಾ ಪಂ ನಿವೃತ್ತ ಕಾರ್ಯದರ್ಶಿಗಳ ಅವೈಜ್ಞಾನಿಕ ಪಿಂಚಣಿ ಸರಿಪಡಿಸಲು ಒತ್ತಾಯ

# ಕೊನೆಗಾಲದಲ್ಲಿ ಸಂಕಷ್ಟಕ್ಕೆ ದೂಡಿದ ಸರ್ಕಾರ

■ವಿಜಯಸಾಕ್ಷಿ ಸುದ್ದಿ, ಗಂಗಾವತಿ

ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸಿ ನಿವೃತ್ತಿ ಹೊಂದಿದ ಕಾರ್ಯದರ್ಶಿ ಮತ್ತು ಪಿಡಿಒ ಇತರರನ್ನು ಸರ್ಕಾರ ವೈಜ್ಞಾನಿಕವಾಗಿ ಪರಿಗಣಿಸಿ ಸೂಕ್ತ ಪಿಂಚಣಿ ನೀಡಬೇಕೆಂದು ನಿವೃತ್ತ ಕಾರ್ಯದರ್ಶಿ ಬಿ.ವಿರುಪಣ್ಣ ಢಣಾಪುರ ಒತ್ತಾಯಿಸಿದರು.

ಅವರು ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಹಲವಾರು ವರ್ಷಗಳ ಹೋರಾಟದ ಬಳಿಕ ಅರೆಕಾಲಿಕ ಗ್ರಾ.ಪಂ ನೌಕರರನ್ನು ಖಾಯಂಗೊಳಿಸಿದ್ದು, ನಮ್ಮ ಹಿಂದಿನ ಸೇವಾ ಅವಧಿಯನ್ನು ಪರಿಗಣಿಸದೆ ತಮ್ಮ ವಿವೇಚನೆಗೆ ಬಂದಂತೆ ಕೆಲವರಿಗೆ ನಿವೃತ್ತಿ ವೇತನ ನೀಡುತ್ತಿದ್ದು, ಇನ್ನು ಕೆಲವರನ್ನು ಹೊರಗಿಟ್ಟಿರುವ ಸರಕಾರಗಳ ಇಬ್ಬಗೆಯ ನೀತಿಯು ಕೊನೆಗಾಲದಲ್ಲಿ ನಮ್ಮನ್ನು ಅಭದ್ರತೆಯತ್ತ ದೂಡುತ್ತಿದೆ ಎಂದು ಕಿಡಿಕಾರಿದರು.




ನಿವೃತ್ತ ಕಾರ್ಯದರ್ಶಿಗಳನ್ನು ಸರಿಸಮವಾಗಿ ಪರಿಗಣಿಸಬೇಕು, ನಿವೃತ್ತರು ಅನುಭವಿಸುವ ಸಂಕಷ್ಟ ಅರಿಯಬೇಕು, ಸೇವಾ ಅವಧಿಯನ್ನು ಪರಿಗಣಿಸಿ ಅವರಿಗೆ ನ್ಯಾಯಯುತವಾಗಿ ದೊರಕಬೇಕಾದ ಪಿಂಚಣಿ ನೀಡಬೇಕು, ಗ್ರಾಮ ಪಂಚಾಯಿತಿಗಳಲ್ಲಿ 20-25 ವರ್ಷ ಸೇವೆ ಸಲ್ಲಿಸಿ ನಂತರ ಬಡ್ತಿ ಹೊಂದಿದ ನೌಕರರು ನಿವೃತ್ತರಾಗಿದ್ದು, ಇವರಿಗೆ ಹಿಂದಿನ ಸೇವಾ ಅವಧಿಯನ್ನು ಪರಿಗಣಿಸದೆ ಇರುವುದು ವ್ಯರ್ಥವಾದಂತಾಗಿದೆ. ನೌಕರರು ಎನ್ನುವ ಕಾರಣಕ್ಕೆ ರೇಷನ್ ಕಾರ್ಡ್ ಇಲ್ಲ, ಸರಕಾರಿ ಹಿರಿಯ ನಾಗರಿಕರ ಸಂಬಳ ಇಲ್ಲದಂತಾಗಿದೆ. ಅನೇಕ ನಿವೃತ್ತ ನೌಕರರು ಚಿಕಿತ್ಸೆಗೆ ಹಣ ಇಲ್ಲದೆ ಮಲಗಿದಲ್ಲೇ ಮಲಗಿ ಜೀವ ಬಿಟ್ಟ ಉದಾಹರಣೆಗಳಿವೆ. ಜನಪ್ರತಿನಿಧಿಗಳು ಸರಕಾರದ ಗಮನ ಸೆಳೆದು ಸೂಕ್ತ ಪಿಂಚಣಿ ಒದಗಿಸಬೇಕೆಂದು ಅಗ್ರಹಿಸಿದರು.

ಗ್ರಾ.ಪಂ ನಿವೃತ್ತ ಕಾರ್ಯದರ್ಶಿಗಳಾದ ಮಲ್ಲಿಕಾರ್ಜುನ ಜಿ.ಎಲಿಗೇರಿ, ಮಲ್ಲಪ್ಪ ಗವಿಸಿದ್ದಪ್ಪ ಜಟ್ಟಿ, ಕೆ. ರಾಜಶೇಖರ್ ಗೌಡ, ವಿರೂಪಣ್ಣ ಮಡಿವಾಳ, ಮಲ್ಲಪ್ಪ ಕಂಬಾರ, ಡಿ.ಎಲ್ಲನಗೌಡ ಮುಂತಾದವರು ಉಪಸ್ಥಿತರಿದ್ದರು.

# ಕವನ ರಚನೆ ಅತ್ಯಂತ ಕ್ಲಿಷ್ಟ ಕಾರ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕವನ ರಚನೆ ಮಾಡುವುದು ಅತ್ಯಂತ ಕ್ಲಿಷ್ಟಕರ ಕಾರ್ಯವಾಗಿದೆ ಎಂದು ನಿವೃತ್ತ ಉಪನ್ಯಾಸಕ ಬಿ.ಜಿ. ಯಳವತ್ತಿ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು, ಶರಣ ಸಾಹಿತ್ಯ ಪರಿಷತ್ತು, ಕದಳಿ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ ಕವಿಗೋಷ್ಠಿ ಹಾಗೂ ಕನಕದಾಸರ ಜಯಂತ್ಯುತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಾಕಷ್ಟು ಕವಿಗಳು ನಾಡು, ನುಡಿ, ನೆಲ, ಜಲ ಕಾಪಾಡುವ ಹಾಗೂ ನಾಡಿಗಾಗಿ ದುಡಿಯುತ್ತ, ತಮ್ಮ ತಮ್ಮ ಭಾವನೆಗಳನ್ನು ವ್ಯಕ್ತಪಡಿಸುವ ಮೂಲಕ ಹೆಸರಾದರು. ಇಂದಿನ ಯುವಕರು, ವಿದ್ಯಾರ್ಥಿಗಳಿಗೆ ಕವಿಗೋಷ್ಠಿ ಏರ್ಪಡಿಸುವ ಮೂಲಕ ಮಕ್ಕಳಲ್ಲಿ ನಾಡು-ನುಡಿ, ನೆಲ-ಜಲ, ಭಾಷೆ ವ್ಯಕ್ತಪಡಿಸಲು, ಸಾಹಿತ್ಯಾಭಿಮಾನ ಹೆಚ್ಚಿಸಲು ಈ ಕವಿಗೋಷ್ಠಿ ಸಹಕಾರಿಯಾಗಿದೆ ಎಂದರು. ಉಪನ್ಯಾಸಕ ಎಸ್.ಎ. ಯಳವತ್ತಿ ಮಾತನಾಡಿ, ಕನಕದಾಸರು ತಮ್ಮ ಕೀರ್ತನೆಯಿಂದ ನಾಡಿನಲ್ಲಿನ ಅಂಕು-ಡೊಂಕೂ ತಿದ್ದುವ ಮೂಲಕ ಇಂದಿಗೂ ಪ್ರಸ್ತುತರಾಗಿದ್ದಾರೆ. ಅವರ ಕವನ ಸಂಕಲನಗಳು ನಮಗೆಲ್ಲರಿಗೂ ದಾರಿ ದೀಪವಾಗಿವೆ. ಈ ಕವಿಗೋಷ್ಠಿಯಿಂದ ಮಕ್ಕಳಲ್ಲಿ ಸಾಹಿತ್ಯಾಭಿಮಾನ ಹೆಚ್ಚಾಗಿದೆ ಎಂದರು.

ಕವನ ವಾಚನದಲ್ಲಿ ಜ್ಯೋತಿ ನೀಲಗುಂದ ಪ್ರಥಮ, ಮಂಗಳಾ ನೀಲಗುಂದ ದ್ವಿತೀಯ, ಅಭಿಷೇಕ ಕರಿಗಾರ ತೃತೀಯ ಸ್ಥಾನ ಪಡೆದರು. ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಮಂಜುನಾಥ ಮಟ್ಟಿ, ಕದಳಿ ವೇದಿಕೆ ಅಧ್ಯಕ್ಷೆ ರಾಜೇಶ್ವರಿ ಬಡ್ನಿ, ಸುಮನ ಚವಡಿ, ಹೊನ್ನಪ್ಪ ನೀಲಗುಂದ, ಪ್ರಕಾಶ ಮದ್ದಿನ, ಪ್ರಭು ಕರಿಗಾರ, ಮಹೇಶ ಶಿರಹಟ್ಟಿ, ಶಿವಾನಂದ ಆಪ್ತಗೇರಿ, ಮಾಹಾಂತೇಶ ನಪೂರಿಮಠ, ಮಾಹಾಂತೇಶ ಮಡಿಕೇರಿ ಇದ್ದರು.

# ಓಬವ್ವಳ ಸಮಯಪ್ರಜ್ಞೆ ಎಲ್ಲರಿಗೂ ಸ್ಫೂರ್ತಿ

▶▶ಮೊದಲನೇ ಪುಟದಿಂದ

ಮಹಿಳೆಯರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಮಾಜದ ಸಾಧಕರಿಗೆ ಹಾಗೂ ಎಸ್‌ಎಸ್‌ಎಲ್‌ಸಿ, ಪಿಯುಸಿ, ಉನ್ನತ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಸ್ನ್ಮಾನಿಸ್ಲಾಯಿಿತ್ು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಡಿವೈಎಸ್‌ಪಿ ಶಿವಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ನಂದಾ ಹಣಬರಟ್ಟಿ, ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಬಸನಗೌಡ್ರ ಕೋಟೂರ, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮುದಾಯದ ಗಣ್ಯರು, ಹಿರಿಯರು ಹಾಜರಿದ್ದರು.

ವಿರೂಪಾಕ್ಷಪ್ಪ ಗೂರನವರ ತಂಡದವರು ನಾಡಗೀತೆ ಪ್ರಸ್ತುತಪಡಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿ ವಂದಿಸಿದರು. ಆರ್.ಬಿ. ಚಿನಿವಾಲರ ಕಾರ್ಯಕ್ರಮ ನಿರ್ವಹಿಸಿದರು.

# ಆರೋಗ್ಯ ಕಾಪಾಡಿದರೆ ಮಾತ್ರ ಸಾಧನೆ ಸಾಧ್ಯ

▶▶ಮೊದಲನೇ ಪುಟದಿಂದ

ಸಿಬ್ಬಂದಿಗಳ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಗದಗ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆಪ್ತ ಸಮಾಲೋಚಕರಾದ ಎಸ್.ಬಿ. ಪಾಟೀಲ ರಕ್ತದಾನದ ಬಗ್ಗೆ ತಿಳಿಸಿ, 12.5ಕ್ಕಿಂತ ಹೆಚ್ಚು ಹಿಮೋಗ್ಲೋಬಿನ್ ಇದ್ದವರು ರಕ್ತದಾನಕ್ಕೆ ಅರ್ಹರು. ರಕ್ತ ಕೊಟ್ಟರೆ ದಪ್ಪ ಅಥವಾ ತೆಳ್ಳಾಗುವುದಿಲ್ಲ, ಬದಲಿಗೆ ದಾನಿಗೆ ಆರೋಗ್ಯ ಲಾಭವೇ ಸಿಗುತ್ತದೆ ಎಂದು ಧೈರ್ಯ ತುಂಬಿದರು.


ರೋಣ ತಾಲೂಕ ಆಸ್ಪತ್ರೆಯ ಹೃದಯರೋಗ ತಜ್ಞ ಡಾ. ಪ್ರವೀಣ ಅಣಗೌಡ್ರ ಮಾತನಾಡಿ, ರಕ್ತದಲ್ಲಿ ಮೂರು ಪ್ರಕಾರಗಳಿವೆ. ನೀವು ಕೊಡುವ ರಕ್ತದಿಂದ ಹಲವು ಜೀವಗಳು ಉಳಿಯುತ್ತವೆ. ಎಲ್ಲರೂ ರಕ್ತದಾನ ಮಾಡಿ ಪುಣ್ಯದ ಕೆಲಸ ಮಾಡಿ ಎಂದರು.

ಮುಖ್ಯ ಅತಿಥಿಗಳಾಗಿ ತಾಲೂಕು ವೈದ್ಯಾಧಿಕಾರಿ ಡಾ. ಬಿ.ಎಸ್. ಭಜಂತ್ರಿ, ಪ್ಯಾಥಾಲಾಜಿಸ್ಟ್ ಡಾ. ಹರೀಶ್ ಪೆರಮಿ, ಸಿಎಂಓ ಡಾ. ಶಕೀಲ ಅಹ್ಮದ್ ದುಂದರಗಿ, ಡಾ. ರಘು ಹೊಸೂರ, ಡಾ. ದಾನಮ್ಮ ಹುಲಕುಂದ, ಡಾ. ಶಿವಪ್ರಸಾದ್ ಹಿರೇಮಠ, ಡಾ. ಸಂತೋಷ ಗಚ್ಚಿನಮನಿ, ತಾಲೂಕಾಸ್ಪತ್ರೆ ವೈದ್ಯಾಧಿಕಾರಿಗಳು, ಜಿಲ್ಲಾ ವ್ಯವಸ್ಥಾಪಕರು, ಎನ್‌ಆರ್‌ಎಲ್‌ಎಂ ಬಸವರಾಜ ಮೂಲಿಮನಿ, ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳ ಸರ್ವ ಸಿಬ್ಬಂದಿಗಳು, ತಾ.ಪಂ ಸಿಬ್ಬಂದಿಗಳು, ನರೇಗಾ ಸಿಬ್ಬಂದಿಗಳು, ಎನ್‌ಆರ್‌ಎಲ್‌ಎಮ್ ಸಿಬ್ಬಂದಿಗಳು ಸೇರಿದಂತೆ ಸಾರ್ವಜನಿಕರು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿಗಳು ಹಾಜರಿದ್ದರು.

ಗಜೇಂದ್ರಗಡ ತಾ.ಪಂ ಐಇಸಿ ಕೋ-ಆರ್ಡಿನೇಟರ್ ಸುರೇಶ ಬಾಳಿಕಾಯಿ ಸ್ವಾಗತಿಸಿದರು. ತಾ.ಪಂ ಆಡಳಿತ ಸಹಾಯಕರಾದ ಅರುಣ ಶಿಂಗ್ರಿ ನಿರೂಪಿಸಿ ವಂದಿಸಿದರು.

# ನಿಧನ

## ಷಣ್ಮುಖಸಾ ರೇವಣಸಾ ಬಸವಾ



**ಗದಗ:** ಬೆಟಗೇರಿಯ ನಿವಾಸಿ, ಖ್ಯಾತ ಉದ್ಯಮಿ ಹಾಗೂ ಬೆಟಗೇರಿಯ ಶ್ರೀರಂಗಪ್ಪಜ್ಜನ ಟ್ರಸ್ಟ್ ಕಮಿಟಿಯ ಅಧ್ಯಕ್ಷರಾದ ಷಣ್ಮುಖಸಾ ರೇವಣಸಾ ಬಸವಾ (90) ಅವರು ಮಂಗಳವಾರ ಸಂಜೆ ನಿಧನರಾದರು. ಮೃತರು ಪತ್ನಿ, ಗದಗ-ಬೆಟಗೇರಿ ನಗರಸಭೆಯ ಮಾಜಿ ಸದಸ್ಯ ಬಲರಾಮಸಾ ರೇವಣಸಾ ಬಸವಾ ಸೇರಿದಂತೆ ಆರು ಜನ ಪುತ್ರರು, ಇಬ್ಬರು ಪುತ್ರಿಯರು, ಸೊಸೆಯಂದಿರು, ಅಳಿಯಂದಿರು ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

**ಸಂತಾಪ:** ಷಣ್ಮುಖಸಾ ಬಸವಾ ಅವರ ನಿಧನಕ್ಕೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ-ಬೆಟಗೇರಿ ಎಸ್.ಎಸ್.ಕೆ ಸಮಾಜದ ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ ಸೇರಿದಂತೆ ಸಮಾಜ ಬಾಂಧವರು ತೀವ್ರ ಸಂತಾಪ ಸೂಚಿಸಿದ್ದಾರೆ.

# ಖರೀದಿ ಕೇಂದ್ರ ಸ್ಥಾಪಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮೆಕ್ಕೆಜೋಳದ ಬೆಳೆಗೆ ಬೆಂಬಲ ಬೆಲೆ ಘೋಷಣೆಯಾಗಿದ್ದು, ಖರೀದಿ ಕೇಂದ್ರ ಸ್ಥಾಪನೆ ಮಾಡಬೇಕೆಂದು ಶಿರಹಟ್ಟಿ ತಾಲೂಕಾ ಭಾರತೀಯ ಕಿಸಾನ್ ಸಂಘದ ವತಿಯಿಂದ ತಹಸೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಉಪಾಧ್ಯಕ್ಷ ಶಿವಪುತ್ರಪ್ಪ ನೆಲಗುಡ್ಡದ, ಜಿಲ್ಲಾ ಪ್ರ.ಕಾ. ರಮೇಶ ಕೋಳಿವಾಡ, ಜಿಲ್ಲೆಯಲ್ಲಿ ಅತೀ ಹೆಚ್ಚು ರೈತರು ಮುಂಗಾರು ಹಂತದಲ್ಲಿ ಬಿತ್ತನೆ ಮಾಡಿದ್ದು, ಅಕ್ಟೋಬರ್ 15ರಿಂದ ಇಲ್ಲಿಯವರೆಗೆ ರೈತರು ಬೆಳೆ ಕಟಾವು ಮಾಡುತ್ತಿದ್ದಾರೆ. ರೈತರ ಆರ್ಥಿಕ ಪರಿಸ್ಥಿತಿ ಗಂಭೀರವಾಗಿದ್ದು, ಮಾರಾಟ ದರ ಸದ್ಯ 1600-1800ರೂ.ಗಳವರೆಗೆ ಮಾತ್ರ ಇದೆ. ರೈತರು ಬ್ಯಾಂಕ್ ಸಾಲ, ಕೈಗಡ ಸಾಲ ಮಾಡಿಕೊಂಡಿದ್ದಾರಲ್ಲದೆ, ಬೆಳೆ ನಿರ್ವಹಣೆ ಮಾಡಲು ಸಾಕಷ್ಟು ಹಣ ಖರ್ಚು ಮಾಡುತ್ತಿದ್ದಾರೆ. ಆದ್ದರಿಂದ ಸರಕಾರ ಕನಿಷ್ಠ ಬೆಂಬಲ ಬೆಲೆ ಯೋಜನೆಯೊಳಗೆ ನಿಗದಿಪಡಿಸಿದ 2400 ರೂ ದರದಲ್ಲಿ ಜಿಲ್ಲೆಯ ಎಲ್ಲಾ ತಾಲೂಕು/ಗ್ರಾಮಗಳ ಸೇವಾ ಸಹಕಾರಿ ಸಂಘಗಳ ಮುಖಾಂತರ ಖರೀದಿ ಮಾಡಬೇಕು. ಕಡಿಮೆ ದರದಲ್ಲಿ ಮೆಕ್ಕೆಜೋಳ ಖರೀದಿ ಮಾಡುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಮನವಿಯಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಲಕ್ಷ್ಮಣ ಸಾವಿರಕುರಿ, ಫಕ್ಕೀರಪ್ಪ ದೊಡ್ಡಮನಿ, ದೇವಪ್ಪ ಉಪ್ಪಾರ, ಚಂದ್ರಗೌಡ ಪಾಟೀಲ, ಮಲ್ಲಿಕಾರ್ಜುನ ಸೊರಟೂರ, ಮಲ್ಲಪ್ಪ ದುರಗಣ್ಣವರ, ಶಿವಪುತ್ರಪ್ಪ ತಾರೀಕೊಪ್ಪ, ಮಂಜುನಾಥ ಕೊಟಗಿ ಮುಂತಾದವರು ಉಪಸ್ಥಿತರಿದ್ದರು.

# ಮಾನವೀಯ ಗುಣಗಳುಳ್ಳ ಸಮಾಜವನ್ನು ನಿರ್ಮಿಸೋಣ

▶▶ಮೊದಲನೇ ಪುಟದಿಂದ



ನರೇಗಲ್ ಹಿರೇಮಠದ ಮಲ್ಲಿಕಾರ್ಜುನ ಹಿರೇಮಠ ಶಿವಾಚಾರ್ಯರು, ಸೇವಾ ಸಮಿತಿ ಅಧ್ಯಕ್ಷ ಕಿರಣ್ ಬೂಮಾ, ಎಚ್.ಎಸ್. ಶಿವನಗೌಡ್ರ, ರವಿ ದಂಡಿನ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಕಾಂಗ್ರೆಸ್ ಮುಖಂಡ ಬಿ.ಬಿ. ಅಸೂಟಿ, ಉಮೇಶಗೌಡ ಪಾಟೀಲ, ವಿಜಯಲಕ್ಷ್ಮೀ ಮಾನ್ವಿ, ವೆಂಕಟೇಶ ಕುಲಕರ್ಣಿ, ವಿನೋದ ಶಿದ್ಲಿಂಗ್ ಸೇರಿದಂತೆ ಹಿಮಾಲಯದಿಂದ ಆಗಮಿಸಿದ್ದ ಸಾಧು-ಸಂತರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

# ವೀರ ವನಿತೆ ಒನಕೆ ಓಬವ್ವ ಜಯಂತಿ




■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿಯ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕೇಂದ್ರ ಕಛೇರಿಯಲ್ಲಿ ವೀರ ವನಿತೆ ಒನಕೆ ಓಬವ್ವ ಜಯಂತಿಯ ಅಂಗವಾಗಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ದೀಪ ಬೆಳಗಿಸುವುದರ ಮೂಲಕ ಆಚರಿಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ವಿರೂಪಾಕ್ಷ ಕಟ್ಟಿಮನಿ, ಒಬ್ಬ ಸಾಮಾನ್ಯ ಮಹಿಳೆ ತನ್ನ ರಾಜ್ಯವನ್ನು ಹೇಗೆ ಕಾಪಾಡಬಹುದು ಎಂಬುದನ್ನು ತೋರಿಸಿಕೊಟ್ಟ ವೀರನಾರಿ, ಒನಕೆ ಓಬವ್ವಳು ಹೈದರಾಲಿ ಸೈನಿಕರನ್ನು ಒನಕೆಯಿಂದ ಹೊಡೆದುರುಳಿಸಿ ಸಾಹಸ ಮೆರೆದವಳು ಎಂದರು.

ಕಾರ್ಯಕ್ರಮದಲ್ಲಿ ಇಲಾಖಾ ಮುಖ್ಯಸ್ಥರಾದ ವಿವೇಕಾನಂದ ವಿಶ್ವಜ್ಞ, ಗಣೇಶ ರಾಠೋಡ್, ಶಶಿಧರ ಕುಂಬಾರ, ಜಗದಂಬಾ ಕೋಪರ್ಡೆ, ಸುಮನಾ ಯು, ನವೀನಕುಮಾರ ತಿಪ್ಪಾ, ಜಿ. ಹನುಮನಗೌಡರ, ದಯಾನಂದ ಪಾಟೀಲ, ಎಮ್.ಎಮ್. ಶಂಕರಪ್ಪ ಮತ್ತು ಕೇಂದ್ರ ಕಛೇರಿಯ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು. ವಿರೂಪಾಕ್ಷ ಕಟ್ಟಿಮನಿ ಕಾರ್ಯಕ್ರಮ ನಿರೂಪಿಸಿದರು.

# ಉಚಿತ ವಾಹನ ಚಾಲನಾ ತರಬೇತಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

2024-25ನೇ ಸಾಲಿನ SCSP/TSP ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ(SC/ST) ಅರ್ಹ/ನಿರುದ್ಯೋಗಿ/ಯುವಕ/ಯುವತಿಯರಿಗೆ ಊಟ-ಉಪಹಾರ ಹಾಗೂ ವಸತಿ ಸಹಿತ 30 ದಿನಗಳವರೆಗೆ ಲಘು ಮತ್ತು ಭಾರೀ ವಾಹನ ಚಾಲನಾ ತರಬೇತಿಯನ್ನು ಪರವಾನಿಗೆ ಪತ್ರದ ವ್ಯವಸ್ಥೆಯೊಂದಿಗೆ ಉಚಿತವಾಗಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರ ಗೋಕುಲ್ ರಸ್ತೆ, ಹುಬ್ಬಳ್ಳಿ ಹಾಗೂ ಶಿಗ್ಗಾಂವ ತರಬೇತಿ ಕೇಂದ್ರ, ಗಂಗಿಭಾವಿ ರಸ್ತೆ, ಶಿಗ್ಗಾಂವ ಹಾಗೂ ಇಲ್ಲಿ ನೀಡಲಾಗುವುದು.

ಅರ್ಹ ಫಲಾನುಭವಿಗಳು ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ತರಬೇತಿ ಕೇಂದ್ರದ ದೂರವಾಣಿ ಸಂಖ್ಯೆ-9663653500/ 9449925367/ 9449971416/7996864758ನ್ನು ಸಂಪರ್ಕಿಸಬಹುದಾಗಿದೆ ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

### ರಾಜರಾಜೇಶ್ವರಿ ಮಹಿಳಾ ಸಾಹಿತ್ಯ, ಸಾಂಸ್ಕೃತಿಕ ವೇದಿಕೆಯಿಂದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ

# ಬಾಯಿ ಮಾತಿನಿಂದ ಕನ್ನಡ ಉಳಿಸಲಾಗದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ಎಂಬುದು ಬರಿಯ ಭಾಷೆಯಲ್ಲ. ಅದು ಈ ನೆಲದ ಸಂಸ್ಕೃತಿ, ಸಂಸ್ಕಾರ, ಪರಂಪರೆ ಸಾರುವ ಶಕ್ತಿಯಾಗಿದೆ. ಪ್ರತಿಯೊಬ್ಬ ಕನ್ನಡಿಗರಲ್ಲೂ ಕನ್ನಡ ಭಾಷೆ, ನೆಲ, ಜಲದ ಬಗ್ಗೆ ಅಭಿಮಾನ, ಸ್ವಾಭಿಮಾನ ಅಂತರ್ಗತವಾಗಿರಬೇಕು ಎಂದು ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.




ಅವರು ಪಟ್ಟಣದ ಸರಕಾರಿ ಪ್ರಾಥಮಿಕ ಶಾಲೆ ನಂ.4ರ ಹತ್ತಿರವಿರುವ ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ಸಭಾಂಗಣದಲ್ಲಿ ಮಂಗಳವಾರ ವೇದಿಕೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 70ನೇ ರಾಜ್ಯೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಕನ್ನಡ ಹೃದಯದ ಭಾಷೆಯಾಗಿದ್ದು, ಅದು ನಮ್ಮ ಉಸಿರಾಗಬೇಕು. ಕನ್ನಡಕ್ಕಾಗಿ ಕೈ ಎತ್ತು, ನಿನ್ನ ಕೈ ಕಲ್ಪವೃಕ್ಷವಾಗುತ್ತದೆ ಎಂಬ ಹಿರಿಯರ ವಾಣಿಯಂತೆ ಕನ್ನಡದ ನೆಲ, ಜಲ, ಭಾಷೆಯ ಬಗ್ಗೆ ಪ್ರತಿಯೊಬ್ಬರಲ್ಲಿಯೂ ಆತ್ಮಾಭಿಮಾನ ಬೆಳೆಯಬೇಕು. ಕೇವಲ ಬಾಯಿ ಮಾತಿನಿಂದ ಕನ್ನಡ ಉಳಿಸಲು ಸಾಧ್ಯವಿಲ್ಲ. 2 ಸಾವಿರ ವರ್ಷಗಳ ಇತಿಹಾಸ ಹೊಂದಿರುವ ಕನ್ನಡ ನಾಡು-ನುಡಿಯನ್ನು ಮತ್ತಷ್ಟು ಶ್ರೀಮಂತಗೊಳಿಸುವಲ್ಲಿ ನುಡಿಗಿಂತ ನಡೆ ಮುಖ್ಯವಾಗಿದೆ. ರಾಜ್ಯೋತ್ಸವ ಆಚರಣೆ ನಿತ್ಯೋತ್ಸವವಾಗಬೇಕು ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿಜ್ಞಾನ, ತಂತ್ರಜ್ಞಾನ, ಅನ್ಯಭಾಷಿಕರ ಪ್ರಭಾವದಿಂದ ಇಂದು ಕನ್ನಡ ನೆಲ, ಜಲ, ಭಾಷೆಗೆ ಅನ್ಯ ಭಾಷಿಕರಿಂದ ತೊಂದರೆ ಉಂಟಾಗುತ್ತಿದೆ. ಗಡಿ ಭಾಗಗಳಲ್ಲಂತೂ ಕನ್ನಡಕ್ಕೆ ಕುತ್ತು ಎದುರಾಗಿದೆ. ಕನ್ನಡ ನಮ್ಮ ನೆಲದ ಭಾಷೆ. ಅದನ್ನು ಉಳಿಸಿ-ಬೆಳೆಸುವುದು ನಮ್ಮ ಜವಾಬ್ದಾರಿ. ಬೇರೆ ಭಾಷೆಯ ಜ್ಞಾನ ಬೇಕು, ಆದರೆ ಕನ್ನಡ ಉಸಿರಾಗಬೇಕು. ಕನ್ನಡ ಉಳಿದರೆ ನಮ್ಮ ಸಂಸ್ಕೃತಿ, ಪರಂಪರೆ ಉಳಿಯಲು ಸಾಧ್ಯ ಎಂದರು.

ಮಕ್ಕಳಿಗೆ ಬಾಲ್ಯದಲ್ಲಿಯೇ ಕನ್ನಡದ ಬಗ್ಗೆ ಗೌರವಾಭಿಮಾನ ಮೂಡಿಸಬೇಕು. ಕನ್ನಡ ನಮ್ಮ ಉಸಿರಾಗಬೇಕು. ಕನ್ನಡವನ್ನು ಉಳಿಸಿ-ಬೆಳೆಸಬೇಕೆನ್ನುವ ಎಲ್ಲರ ನಿರ್ಧಾರ ತಮ್ಮ ತಮ್ಮ ಮನೆಗಳಿಂದಲೇ ಆರಂಭವಾಗಬೇಕು.

ಅಂದಾಗ ಮಾತ್ರ ಕನ್ನಡಕ್ಕೆ ಒಂದು ಬೆಲೆ ಬರಲು ಸಾಧ್ಯವಾಗುತ್ತದೆ. ಕನ್ನಡ ಮಾಧ್ಯಮದ ಬಗ್ಗೆ ನಮ್ಮಲ್ಲಿರುವ ಕೀಳರಿಮೆ ಕಡಿಮೆಯಾಗಬೇಕು. ಈ ನಿಟ್ಟಿನಲ್ಲಿ ತಾಯಂದಿರ ಪಾತ್ರ ಮಹತ್ವದ್ದಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ವಿದ್ಯಾಪೀಠ ಪಾಠಶಾಲೆಯ ಪ್ರಾಚಾರ್ಯೆ ಪ್ರಗತಿ ತಾವರೆ ಉಪನ್ಯಾಸ ನೀಡಿ, ಕನ್ನಡ ಭಾಷೆ, ನೆಲ, ಜಲದ ಹಿರಿಮೆ-ಗರಿಮೆಯ ಬಗ್ಗೆ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವೇದಿಕೆ ಅಧ್ಯಕ್ಷೆ ಹಾಗೂ ರಾಜ್ಯಮಟ್ಟದ ಪ್ರಶಸ್ತಿ ಪುರಸ್ಕೃತೆ ಲಲಿತಕ್ಕ ಕೆರಿಮನಿ ವಹಿಸಿದ್ದರು. ನೀಲಕ್ಕ ಬೂದಿಹಾಳ, ಪ್ರತಿಮಾ ಮಹಾಜನಶೆಟ್ಟರ, ಲತಾ ತಟ್ಟಿ, ನಿರ್ಮಲಾ ಅರಳಿ, ಗಂಗಾಧರ ಮೆಣಸಿನಕಾಯಿ ಸೇರಿ ಅನೇಕರಿದ್ದರು. ಅಶ್ವಿನಿ ಅಂಕಲಕೋಟಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪಾರ್ವತಿ ಕಳ್ಳಿಮಠ ಪ್ರಾರ್ಥಿಸಿದರು.ನಿರ್ಮಲಾ ಅರಳಿ ಸ್ವಾಗತಿಸಿದರು, ಡಿ.ಎಫ್. ಪಾಟೀಲ ನಿರೂಪಿಸಿದರು. ರತ್ನಾ ಕರ್ಕಿ ವಂದಿಸಿದರು.

# ಖಾಸಗಿ ಶಾಲೆಯ ಬಾತ್ರೂಮ್‌ನಲ್ಲಿ ಪಟಾಕಿ ಬ್ಲಾಸ್ಟ್; ಬೆಚ್ಚಿಬಿದ್ದ ಸ್ಟೂಡೆಂಟ್ಸ್!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರು ಹೊರವಲಯದ ಆನೇಕಲ್ ತಾಲೂಕಿನ ಬನ್ನೇರುಘಟ್ಟ ಸಮೀಪದ ಎಸ್ ಬಿಂಗಿಪುರದ ಖಾಸಗಿ ಶಾಲೆಯೊಂದರಲ್ಲಿ ಆಘಾತಕಾರಿ ಘಟನೆಯೊಂದು ಬೆಳಕಿಗೆ ಬಂದಿದೆ.

ಶಾಲೆಯ ಬಾತ್ರೂಮ್‌ನಲ್ಲಿ ಪಟಾಕಿ ಬ್ಲಾಸ್ಟ್ ಆದ ಭಾರೀ ಶಬ್ದಕ್ಕೆ ಬಾಂಬ್ ಎಂದು ಕೊಂಡು ಶಾಲೆಯ ವಿದ್ಯಾರ್ಥಿಗಳು ಹಾಗೂ ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ. ನವೆಂಬರ್ 10ರ ಸೋಮವಾರ ಬೆಳಿಗ್ಗೆ 10:30ರ ಸುಮಾರಿಗೆ ಶಾಲೆಯ ಬಾತ್ರೂಮ್‌ನಲ್ಲಿ ಬ್ಲಾಸ್ಟ್ ಆಗಿರುವ ಸೌಂಡ್ ಕೇಳಿಸಿದೆ. ಇದರಿಂದ ಶಾಲೆಯಲ್ಲಿದ್ದ ವಿದ್ಯಾರ್ಥಿಗಳು ಹಾಗೂ ಸುತ್ತಮುತ್ತಲಿನ ನಿವಾಸಿಗಳು ಆತಂಕಗೊಂಡಿದ್ದಾರೆ. ಕೂಡಲೇ ಶಾಲೆಯ ಸಿಬ್ಬಂದಿ ಪರಿಶೀಲನೆ ನಡೆಸಿದಾಗ ಪಟಾಕಿ ಎಂದು ತಿಳಿದುಬಂದಿದೆ.

ಮಂಗಳವಾರ ಬೆಳಿಗ್ಗೆ ಓರ್ವ ವಿದ್ಯಾರ್ಥಿಯ ಪೋಷಕರು ಪೊಲೀಸರಿಗೆ ಫೋನ್ ಮಾಡಿ, ಶಾಲೆಯಲ್ಲಿ ನಡೆದ ವಿಷಯವನ್ನು ತಿಳಿಸಿದ್ದಾರೆ.

# ಆ್ಯಂಗ್ಲೋ ಉರ್ದು ಶಾಲೆಯಲ್ಲಿ ವಿಶ್ವ ಉರ್ದು ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆ್ಯಂಗ್ಲೋ ಉರ್ದು ಬಾಲಕ ಹಾಗೂ ಬಾಲಕಿಯರ ಪ್ರೌಢಶಾಲೆಯಲ್ಲಿ ಡಾ. ಅಲ್ಲಾಮಾ ಇಕ್ಬಾಲ್ ಹಾಗೂ ಮೌಲಾನ ಅಬುಲ್ ಕಲಾಂ ಆಜಾದ್‌ರವರ ಜನ್ಮದಿನವನ್ನು ವಿಶ್ವ ಉರ್ದು ದಿನಾಚರಣೆ ಹಾಗೂ ರಾಷ್ಟ್ರೀಯ ಶಿಕ್ಷಣ ದಿನಾಚರಣೆಯನ್ನಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಸಹ ಶಿಕ್ಷಕರಾದ ಎಮ್.ಎಮ್. ಪೀರಜಾದೆ, ಡಾ. ಅಲ್ಲಾಮಾ ಇಕ್ಬಾಲ್ ಹಾಗೂ ಮೌಲಾನ್ ಆಜಾದರು ಭಾರತ ಕಂಡ ಮಹಾನ್ ಶಿಕ್ಷಣ ತಜ್ಞರು. ಇವರು ಶಿಕ್ಷಣ ಕ್ಷೇತ್ರಕ್ಕೆ ಹಾಗೂ ಸಾಹಿತ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅವಿಸ್ಮರಣೀಯ. ಆದ್ದರಿಂದ ಇವರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕು ಎಂದರು.

ಎಮ್.ಎ. ಕಮಾನಗಾರ ಮಾತನಾಡುತ್ತ, ಡಾ. ಅಲ್ಲಾಮಾ ಇಕ್ಬಾಲ್ ಹಾಗೂ ಮೌಲಾನ್ ಆಜಾದ್‌ರವರು ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಉರ್ದು ಭಾಷಾ ಸಾಹಿತ್ಯಕ್ಕೆ ಇವರ ಕೊಡುಗೆ ಅಪಾರವಾಗಿದೆ ಹಾಗೂ ತಮ್ಮ ಸಾಧನೆಯನ್ನು ಸುವರ್ಣಾಕ್ಷರಗಳಿಂದ ಬರೆಯುವಂತೆ ಮಾಡಿದ್ದಾರೆ ಎಂದು ತಿಳಿಸಿದರು.

ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಶಿಕ್ಷಕರಾದ ಎಂ.ಎಂ. ಪೀರಜಾದೆ ಪುಸ್ತಕಗಳನ್ನು ಹಾಗೂ ನಗದು ಪುರಸ್ಕಾರವನ್ನು ವಿತರಿಸಿದರು. ಮುಖ್ಯೋಪಾಧ್ಯಾಯರಾದ ಎಲ್. ಅರ್. ಇಟಗಿ ಹಾಗೂ ಎಂ.ಎ. ರಿಕಾಟಿ, ಶಿಕ್ಷಕ ವೃಂದದವರು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ನಫೀಸಾ ಕದಡಿ ನಿರೂಪಿಸಿದರು. ಎಸ್.ಐ. ನದಾಫ್ ಹಾಗೂ ಝುಡ್.ಎ. ಮುಲ್ಲಾ ಪುರಸ್ಕಾರ ವಿತರಣಾ ಕಾರ್ಯಕ್ರಮ ನಡೆಸಿಕೊಟ್ಟರು. ಎಂ.ಎಚ್. ಜಮಾಲಸಾಬನವರ ವಂದಿಸಿದರು.

### ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರದಲ್ಲಿ ಆರ್.ಬಿ. ಬಸವರಡ್ಡೇರ

# ಸಾಮಾನ್ಯರು ಶಿಬಿರಗಳ ಪ್ರಯೋಜನ ಪಡೆಯಿರಿ




■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪರಿಸರದ ಜೊತೆಗೆ ಸಂಪರ್ಕವನ್ನು ಬೆಳೆಸಲು ಕಣ್ಣು ಪ್ರಮುಖವಾಗಿವೆ. ಅವುಗಳನ್ನು ಕಾಲಕಾಲಕ್ಕೆ ಆರೈಕೆ ಮಾಡುವುದು ಅವಶ್ಯಕ. ಸಾಮಾನ್ಯರು ಇಂತಹ ಉಚಿತ ನೇತ್ರ ತಪಾಸಣೆ ಶಿಬಿರಗಳಲ್ಲಿ ಆರೈಕೆ ಮಾಡಿಕೊಂಡು ಶಿಬಿರಗಳ ಪ್ರಯೋಜನ ಪಡೆಯಬೇಕು. ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಆರ್.ಬಿ. ಬಸವರಡ್ಡೇರ ಅಭಿಪ್ರಾಯಪಟ್ಟರು.

ಸಮೀಪದ ಅಬ್ಬಿಗೇರಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಜಯಪ್ರಿಯಾ ಆಸ್ಪತ್ರೆ, ಜಯಪ್ರಿಯಾ ಮೆಡಿಕಲ್ ಫೌಂಡೇಶನ ಹುಬ್ಬಳ್ಳಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ಅಬ್ಬಿಗೇರಿ ಹಾಗೂ ವಿವಿಧ ಸಂಘ-ಸಂಸ್ಥೆಗಳ ಆಶ್ರಯದಲ್ಲಿ ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ತಂತ್ರಜ್ಞಾನಗಳ ಕ್ಷೇತ್ರದಲ್ಲಿ ಎಷ್ಟೇ ಅಭಿವೃದ್ಧಿ ಸಾಧಿಸಿದ್ದರೂ ಮಾನವನ ಅಂಗವನ್ನು ಕೃತಕವಾಗಿ ಉತ್ಪಾದಿಸುವುದರಲ್ಲಿ ಇನ್ನೂ ಪೂರ್ಣ ಸಫಲರಾಗಿಲ್ಲ. ಹಾಗಾಗಿ ಕಣ್ಣಿನಂತಹ ಅಪೂರ್ವವಾದ ಅಂಗವನ್ನು ರಕ್ಷಿಸಿಕೊಳ್ಳಬೇಕಾಗಿದೆ. ವ್ಯಕ್ತಿಯು ಸತ್ತ ನಂತರ ನೇತ್ರ ನಾಶಮಾಡುವ ಬದಲಿಗೆ ದಾನಮಾಡಿದರೆ ಇಬ್ಬರು ವ್ಯಕ್ತಿಗಳಿಗೆ ಉಪಕಾರವಾಗುತ್ತದೆ. ನಾವು ತೀರಿದ ನಂತರ ನಮ್ಮ ದೇಹ ಅಳಿದರೂ ಅಂಧರ ಬಾಳಿಗೆ ಬೆಳಕಾಗುವ ಮೂಲಕ ನಾವು ಶಾಶ್ವತವಾಗಿರುವುದು ಸಾಧ್ಯವಾಗುತ್ತದೆ. ಎಂದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸಿದ್ದು ಹನುಮನಾಳ ಮಾತನಾಡಿ, ದೃಷ್ಟಿಯು ಜಗತ್ತನ್ನು ಅರ್ಥಮಾಡಿಕೊಳ್ಳಲು ಮತ್ತು ಸಂಪರ್ಕಿಸಲು ಮುಖ್ಯವಾಗಿದೆ. ಕಣ್ಣುಗಳು ನಮಗೆ ಸುತ್ತಲಿನ ಪ್ರಪಂಚದೊಂದಿಗೆ ಸಂಪರ್ಕ ಸಾಧಿಸಲು ಸಹಾಯ ಮಾಡುತ್ತವೆ. ನೇತ್ರಗಳು ನಮ್ಮ ಜೀವನದ ಅವಿಭಾಜ್ಯ ಅಂಗವಾಗಿವೆ.

ನೇತ್ರ ತಪಾಸಣಾ ಶಿಬಿರಗಳು ಕಣ್ಣಿನ ರೋಗಗಳನ್ನು ಗುಣಪಡಿಸಲು ಸಹಾಯ ಮಾಡುತ್ತದೆ. ಕಣ್ಣುಗಳ ಆರೋಗ್ಯ ಮತ್ತು ದೃಷ್ಟಿಯನ್ನು ಕಾಪಾಡಿಕೊಳ್ಳುವುದು ವ್ಯಕ್ತಿಯ ವೈಯಕ್ತಿಕ ಅಭಿವೃದ್ಧಿ ಮತ್ತು ವೃತ್ತಿ ಜೀವನಕ್ಕೆ ಅತ್ಯಗತ್ಯ ಎಂದರು.

ತಪಾಸಣಾ ಶಿಬಿರದಲ್ಲಿ 78 ಜನ ನೇತ್ರ ತಪಾಸಣೆಗೆ ಒಳಗಾಗಿ 29 ಜನ ಶಸ್ತ್ರಚಿಕಿತ್ಸೆಗೆ ಆಯ್ಕೆಯಾದರು. ಗುರಣ್ಣ ಅವರಡ್ಡಿ, ಬಸವರಾಜ ಪಲ್ಲೇದ, ಸುರೇಶ ಬಸವರಡ್ಡೇರ, ಎ.ವಿ. ವೀರಾಪೂರ, ಶಿವಪುತ್ರಪ್ಪ ತೆಗ್ಗಿನಕೇರಿ, ರಾಜು ಚನ್ನಪ್ಪಗೌಡ್ರ, ಲಕ್ಷ್ಮವ್ವ ಡಂಬಳ, ಮಲ್ಲು ಯಲ್ಲರಡ್ಡಿ, ವೀರಪ್ಪ ತಳವಾರ, ಅಂದಪ್ಪ ದ್ವಾಸಲ, ಸಕ್ರಗೌಡ ಪಾಟೀಲ, ಸುನಿತಾ ಬಸವರಡ್ಡೇರ, ವಿರೂಪಾಕ್ಷ ಅಕ್ಕಸಾಲಿ, ಶರಣಪ್ಪ ಹೂಗಾರ, ದೇವರಾಜ ತಳಕಲ್, ಶಿವಪ್ಪ ಬಂಡಿಹಾಳ, ಚಂದ್ರು ಶ್ರೀಗಿರಿ, ಶ್ರೀಕಾಂತ ಹಳ್ಳಿ ಉಪಸ್ಥಿತರಿದ್ದರು.

# ಕಾಮಗಾರಿ ಬಿಲ್ ಮಾಡಿಕೊಡಲು ಲಂಚಕ್ಕೆ ಬೇಡಿಕೆ: 'ಲೋಕಾ' ಬಲೆಗೆ ಬಿದ್ದ ಇಬ್ಬರು ಇಂಜಿನಿಯರ್!

■ವಿಜಯಸಾಕ್ಷಿ ಸುದ್ದಿ, ತುಮಕೂರು

ಕಾಮಗಾರಿ ಬಿಲ್ ಮಾಡಿಕೊಡಲು ಗುತ್ತಿಗೆದಾರನ ಬಳಿ ಲಂಚಕ್ಕೆ ಬೇಡಿಕೆಯಿಟ್ಟಿದ್ದ ಇಬ್ಬರು ಎಂಜಿನಿಯರ್ ಗಳು ಲೋಕಾಯುಕ್ತ ಅಧಿಕಾರಿಗಳ ಬಲೆಗೆ ಬಿದ್ದಿದ್ದಾರೆ.

ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್ ರಾಜ್ ತಿಪಟೂರು ವಿಭಾಗದ ಇಬ್ಬರು ಎಂಜಿನಿಯರುಗಳು ಲೋಕಾ ಬಲೆಗೆ ಬಿದ್ದವರು. ತಿಪಟೂರು ನಗರದ ಪ್ರವಾಸಿ ಮಂದಿರದ ಬಳಿ ಶಾಲೆ ದುರಸ್ತಿ ಮಾಡಿದ 6.50 ಲಕ್ಷ ರೂ. ಬಿಲ್ ಪಾವತಿಗೆ ಹೊಸದುರ್ಗ ಭಾಗದ ಗುತ್ತಿಗೆದಾರ ಸುನಿಲ್ ಎಂಬುವವರ ಬಳಿ ಆರೋಪಿತರು ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಅದರಂತೆ 34,500 ರೂ. ಲಂಚದ ಹಣ ತೆಗೆದುಕೊಳ್ಳುವ ಸಮಯದಲ್ಲಿ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಬಿ.ಸಿ.ಸ್ವಾಮಿ ಎಂಬವರನ್ನು ಲೋಕಾಯುಕ್ತ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಬಿಲ್ ಮಾಡಿಕೊಡಲು ಹಣಕ್ಕೆ ಒತ್ತಾಯಿಸಿದ್ದ ಮತ್ತೊಬ್ಬ ಎಂಜಿನಿಯರ್ ಸುಹಾಸ್ ಎಂಬವರನ್ನು ತಿಪಟೂರು ಕಚೇರಿಯಲ್ಲಿ ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

# ಕೆರೆಗಳ ಅಭಿವೃದ್ಧಿ ಮಹತ್ವದ ಕಾರ್ಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೆರೆಗಳು ಜನ, ಜಾನುವಾರು, ಪಶು-ಪಕ್ಷಿಗಳಿಗೆ ಮತ್ತು ಅಂತರ್ಜಲ ಮಟ್ಟ ಕಾಪಾಡುವ ಜೀವ ಸೆಲೆಗಳಾಗಿದ್ದು, ಕೆರೆಗಳ ಅಭಿವೃದ್ಧಿ, ಸಂರಕ್ಷಣೆ ಅತ್ಯಂತ ಮಹತ್ವದ ಕಾರ್ಯವಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಮಂಗಳವಾರ ಪಟ್ಟಣದ ಪುರಸಭೆಯ ಕೆರೆ ಅಭಿವೃದ್ಧಿ ಶುಲ್ಕ 56 ಲಕ್ಷ ರೂ ಅನುದಾನದಲ್ಲಿ ಪಟ್ಟಣದ ಇಟ್ಟಿಕೆರೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಪಟ್ಟಣದಲ್ಲಿ ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿರುವ ಐತಿಹಾಸಿಕ ಹಿನ್ನೆಲೆಯುಳ್ಳ ಇಟ್ಟಿಗೆರೆ ಅಭಿವೃದ್ಧಿಯಾಗಬೇಕು ಎಂಬುದು ಪಟ್ಟಣದ ಜನರ ಅನೇಕ ವರ್ಷಗಳ ಬೇಡಿಕೆಯಾಗಿತ್ತು. ಕೆರೆ ಅಭಿವೃದ್ಧಿ ವಿಷಯದಲ್ಲಿ ಅನೇಕ ವಿರೋಭಾಸಗಳು ಇದ್ದವು. ಇದೀಗ ಕೆರೆ ಅಭಿವೃದ್ಧಿಪಡಿಸುವ ಕಾಲ ಕೂಡಿ ಬಂದಿದೆ. ವೈಜ್ಞಾನಿಕವಾಗಿ ಕೆರೆಗೆ ಸ್ವಚ್ಛವಾದ ನೀರು ಸೇರಬೇಕು ಮತ್ತು ಹೆಚ್ಚುವರಿ ನೀರು ಯಾವುದೇ ತೊಂದರೆಯಾಗದಂತೆ ಹರಿದು ಹೋಗಬೇಕು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯವರು ಕೆರೆ ಅಭಿವೃದ್ಧಿಗೆ ಮುಂದಾಗಿದ್ದಾರೆ. ಕೆರೆಗೆ ನದಿ ನೀರು ಹರಿದು ಬರುವ ಯೋಜನೆ ಅಂತಿಮ ಹಂತದಲ್ಲಿದೆ. ಮಾದರಿ ಕೆರೆಯಾಗಿಸುವ ಕಾರ್ಯಕ್ಕೆ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ. ಕೆರೆ ಅತಿಕ್ರಮಣ ತೆರವುಗೊಳಿಸುವ ಸಂದರ್ಭದಲ್ಲಿ ಮನೆ ಕಳೆದುಕೊಂಡ ಮೂವರಿಗೆ ಆಶ್ರಯ ನಿವೇಶನ ಕಲ್ಪಿಸಲಾಗುವುದು ಎಂದರು.

ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಈ ಹಿಂದಿನ ಮುಖ್ಯಾಧಿಕಾರಿ ಮಹೇಶ ಹಡಪದ, ಮಹಾದೇವಪ್ಪ ಅಣ್ಣಿಗೇರಿ, ಕವಿತಾ ಶರಸೂರಿ, ಎಪಿಎಂಸಿ ಮಾಜಿ ಅಧ್ಯಕ್ಷ ನೀಲಪ್ಪ ಹತ್ತಿ, ಮಂಜುಳಾ ಗುಂಜಳ, ನಿಂಗಪ್ಪ ಬನ್ನಿ, ಅನಿಲ ಮುಳಗುಂದ, ಎಂ.ಆರ್. ಪಾಟೀಲ, ಗಂಗಾಧರ ಮೆಣಸಿನಕಾಯಿ, ಬಸವಣೆಪ್ಪ ನಂದೆಣ್ಣವರ, ಸಿದ್ದಲಿಂಗಯ್ಯ ಹೀರೆಮಠ, ಶಂಕರ ಬ್ಯಾಡಗಿ, ನೀಲಕಂಠಪ್ಪ ಬಂಕಾಪುರ, ಶರಣುಗೋಡಿ, ಟಾಕಪ್ಪ ಸಾತಪುತೆ, ಸಂತೋಷ ಜಾವೂರ, ಪವನ ಬಂಕಾಪುರ, ಕಿರಣ ಮಹಾಂತಶೆಟ್ಟರ, ಪುರಸಭೆ ಇಂಜಿನಿಯರ್ ವೀರೇಂದ್ರ ಸಿಂಗ್ ಕಾಟೇವಾಲೆ, ಸುರೇಶ ಹಟ್ಟಿ, ಪುರಸಭೆ ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಮಂಜುನಾಥ ಹೊಗೆಸೊಪ್ಪಿನ, ಮಂಜುನಾಥ ಗಜಾಕೋಶ ಸೇರಿ ಅನೇಕರಿದ್ದರು.

# ಲಿಂಗತ್ವ ಅಲ್ಪಸಂಖ್ಯಾತರ ಮೇಲಿನ ಹಲ್ಲೆ ಖಂಡನೀಯ

■ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗತ್ವ ಮತ್ತು ಲೈಂಗಿಕ ಬಹುತ್ವಕ್ಕಾಗಿ ಚಳುವಳಿ (MGSP) 2025ರ ಅಕ್ಟೋಬರ್ 30 ಮತ್ತು 31ರ ನಡುವೆ ಬೆಂಗಳೂರು ನಗರದಲ್ಲಿ ನಡೆದ 24 ವರ್ಷದ ಲಿಂಗತ್ವ ಅಲ್ಪಸಂಖ್ಯಾತ (transgender) ಮಹಿಳೆ ಸುಕನ್ಯಾ ಅವರ ಮೇಲೆ ನಡೆದ ಭೀಕರ ಹಲ್ಲೆ, ಅಪಹರಣ, ಅಕ್ರಮ ಬಂಧನ ಮತ್ತು ಬಲವಂತದ ತಲೆ ಬೋಳಿಸುವ ಕೃತ್ಯ ಖಂಡನೀಯ ಎಂದು ಆದಿತ್ಯ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಕ್ಟೋಬರ್ 30ರಂದು ಸುಕನ್ಯಾ ಅವರನ್ನು ಬೆಂಗಳೂರಿನ ಕೃಷ್ಣರಾಜಪುರಂನಿಂದ ಅಪಹರಿಸಲಾಗಿದ್ದು, ಮರದ ಕಟ್ಟಿಗೆ ಮತ್ತು ಸೌಟಿನಿಂದ ಹಲ್ಲೆ ಮಾಡಿ ಕ್ರೂರ ಹಿಂಸೆಗೆ ಒಳಪಡಿಸಲಾಯಿತು. ಅವರ ತಲೆಯನ್ನು ಬಲವಂತವಾಗಿ ಬೋಳಿಸುವ ಮೂಲಕ ಮಹಿಳೆಯಾಗಿ ಅವರ ಲಿಂಗತ್ವ ಅಸ್ತಿತ್ವವನ್ನು ಅಳಿಸಿಹಾಕುವ ಉದ್ದೇಶಿತ ಪ್ರಯತ್ನ ಮಾಡಲಾಯಿತು. ಈ ಹಲ್ಲೆ ಅವರು ಒಂದು ಹಿಜ್ರಾ ಘರಾಣಾಯಿಂದ ಮತ್ತೊಂದಕ್ಕೆ ಸ್ಥಳಾಂತರಗೊಳ್ಳಲು ಬಯಸಿದ್ದರಿಂದ ನಡೆದಿರುವುದಾಗಿ ಹೇಳಲಾಗಿದೆ. ಸುಕನ್ಯಾ ಅವರನ್ನು ಅವರ ಇಚ್ಛೆಗೆ ವಿರುದ್ಧವಾಗಿ ಬಂಧನದಲ್ಲಿಟ್ಟಿದ್ದರು ಎಂದು ಅಸಮಾಧಾನ ವ್ಯಕ್ತಪಡಿಸಿದರು.

MGSP ನ್ಯಾಯ ಮತ್ತು ಹೊಣೆಗಾರಿಕೆಗೆ ಬದ್ಧರಾಗಿರುವ ಸಮುದಾಯದ ಸದಸ್ಯರು ಹಾಗೂ ನಾಯಕರೊಂದಿಗೆ ನಿರಂತರ ಸಂವಾದ ನಡೆಸುತ್ತಿದೆ. ನಾವೆಲ್ಲರೂ ಸೇರಿ ಹಿಂಸೆಯನ್ನು ತಡೆಯಲು ಮತ್ತು ಪ್ರತಿಕ್ರಿಯಿಸಲು ಸಮುದಾಯದ ನೇತೃತ್ವದ ವ್ಯವಸ್ಥೆಗಳನ್ನು ಬಲಪಡಿಸುವುದು, ಪರಸ್ಪರ ಬೆಂಬಲವನ್ನು ಗಟ್ಟಿಗೊಳಿಸುವುದು, ಮತ್ತು ಎಲ್ಲರಿಗೂ ಸುರಕ್ಷತೆ, ಗೌರವ ಹಾಗೂ ಐಕ್ಯತೆಯ ಸಂಸ್ಕೃತಿಯನ್ನು ಉತ್ತೇಜಿಸುವುದೇ ನಮ್ಮ ಉದ್ದೇಶ. ಸುಕನ್ಯಾ ಅವರು ಅನುಭವಿಸಿದ ಹಿಂಸೆ ಅವರ ಮಾನವ ಹಕ್ಕು ಮತ್ತು ಗೌರವದಿಂದ ಬದುಕುವ ಹಕ್ಕು ಉಲ್ಲಂಘನೆಯಾಗಿದೆ. ಯಾವುದೇ ಮೂಲದಿಂದಲಾದರೂ ನಡೆಯುವ ಹಿಂಸೆಯ ವಿರುದ್ಧ ಸುಕನ್ಯಾ ಮತ್ತು ಎಲ್ಲಾ ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಗಳೊಂದಿಗೆ MGSP ದೃಢವಾಗಿ ನಿಂತಿದೆ ಎಂದರು.





ಕರ್ನಾಟಕ ಸರಕಾರ

**ಪಟ್ಟಣ ಪಂಚಾಯತ ಕಾರ್ಯಾಲಯ, ಮುಳಗುಂದ**

ಜಿಲ್ಲೆ: ಗದಗ

ಸಂ:ಪಪಂಮು/ತಾಂ.ವಿ./ಎಸ್.ಬಿ.ಎಂ/ಟೆಂಡರ್/ವಹಿ-/2025-26 ದಿನಾಂಕ:-11-11-2025

**ಅಲ್ಪಾವಧಿ ಟೆಂಡರ್ ಪ್ರಕಟಣೆ**

**ಕರ್ನಾಟಕ ಪಬ್ಲಿಕ್ ಪ್ರೊಕ್ಯೂರಮೆಂಟ್ ಮೂಲಕ**

ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಮುಳಗುಂದ ಇವರಿಂದ ಮುಳಗುಂದ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ-2000ರ ಪ್ರಕಾರ "ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಪೋರ್ಟಲ್" ಪದ್ಧತಿಯಲ್ಲಿ ಸ್ವಚ್ಛ ಭಾರತ ಮಿಷನ್ (ನಗರ) ಯೋಜನೆಯಡಿ ಇಂಡೆಂಟ್ ನಂಬರಗಳ ಸಂಖ್ಯೆಗಳು-**DMA/2025-26/IND5340/CALL-2 & DMA/2025-26/SE6130/CALL-2**ನೇದ್ದರ ಕಾಮಗಾರಿಗಳ ನಿರ್ವಹಣೆಗಾಗಿ ಕೆ.ಡಬ್ಲ್ಯೂ.1/2/3 ದಸ್ತಾವೇಜನಲ್ಲಿ ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಚಾಲ್ತಿ ಸಾಲಿನ ಅರ್ಹ ಏಜೆನ್ಸಿ/ ಗುತ್ತಿಗೆದಾರರಿಂದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಇ-ಪ್ರೋಕ್ಯೂರಮೆಂಟ್ ದಾಖಲೆಗಳಿಗಾಗಿ **http://kppp.karnataka.gov.in** ರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕವೇ ಟೆಂಡರ್ ಸಲ್ಲಿಸುವುದು.

(1) ಇ-ಪ್ರೋಕ್ಯೂರ್‌ಮೆಂಟ್ ಪದ್ಧತಿಯಲ್ಲಿ ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ:20-11-2025 ಸಂಜೆ:16.00** ಗಂಟೆಗೆ (2) ಇ-ಪ್ರೋಕ್ಯೂರ್‌ಮೆಂಟ್ ಪದ್ಧತಿಯಲ್ಲಿ ತಾಂತ್ರಿಕ ಬಿಡ್ ತೆರೆಯುವ **ದಿನಾಂಕ:21-11-2025 ಸಂಜೆ:16.30** ಗಂಟೆಗೆ (3) ಇ-ಪ್ರೋಕ್ಯೂರ್‌ಮೆಂಟ್ ಪದ್ಧತಿಯಲ್ಲಿ ಆರ್ಥಿಕ ಬಿಡ್ ತೆರೆಯುವ **ದಿನಾಂಕ:24-11-2025 ಸಂಜೆ:16:30** ಗಂಟೆಗೆ

ನಿಗಧಿ ಪಡಿಸಿದ ದಿನಾಂಕಗಳು ಒಂದು ವೇಳೆ ರಜಾ ದಿನಗಳನ್ನಾಗಿ ಘೋಷಿಸಲ್ಪಟ್ಟರೆ ಮುಂದಿನ ದಿನಾಂಕವನ್ನು ಪರಿಗಣಿಸಲಾಗುವುದು. ಯಾವುದೇ ತಿದ್ದು ಪಡಿಗಳನ್ನು ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ.

ಈ ಕಚೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲಾ ಕಾಮಗಾರಿ ಇ.ಎಂ.ಡಿ. ಪೂರ್ಣಗೊಳಿಸುವ ಅವಧಿ, ಗುತ್ತಿಗೆದಾರರ ದರ್ಜೆ ಹಾಗೂ ಇನ್ನಿತರ ಹೆಚ್ಚಿನ ಮಾಹಿತಿ ಹಾಗೂ ಷರತ್ತುಗಳಿಗೆ ಕಚೇರಿಯು ವೆಬ್‌ಸೈಟ್ **http://www.mulagundatown.mrc.gov.in** ಹಾಗೂ ಕಚೇರಿ ವೇಳೆಯಲ್ಲಿ ಸಂಬಂಧಿಸಿದ ಶಾಖೆಯಲ್ಲಿ ಮಾಹಿತಿಯನ್ನು ಪಡೆಯಬಹುದು. ಇ-ಪೋರ್ಟಲ್‌ನ ಎಲ್ಲಾ ಷರತ್ತುಗಳು ಅನ್ವಯಿಸುತ್ತವೆ. ಹಾಗೂ ಟೆಂಡರ್ ಮಂಜೂರ ವ ನಾಮಂಜೂರ ಮಾಡುವ ಅಧಿಕಾರವನ್ನು ಪಟ್ಟಣ ಪಂಚಾಯತ ಕಾಯ್ದಿರಿಸಿಕೊಂಡಿದೆ.

**ಸಹಿ/-(ಶ್ರೀ.ಮಂಜುನಾಥ ಪಿ ಗುಳೇದ)** ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ಮುಳಗುಂದ

**ಸಹಿ/-(ಶ್ರೀಮತಿ.ಯಲ್ಲವ್ವ ಕೋಂ.ಬ ಕವಲೂರ)** ಅಧ್ಯಕ್ಷರು, ಪಟ್ಟಣ ಪಂಚಾಯತ ಮುಳಗುಂದ

ವಾ.ಸಾ.ಇ/ಗದಗ/365/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka